ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೬

ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಮಂಗಳವಾರ, ದಿನಾಂಕ : ೦೪ನೇ ಮಾರ್ಚ್, ೨೦೨೫

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ಸಹಕಾರ ಸಚಿವರು

೭. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ವ್ಯವಸಾಯ ಸಹಕಾರ ಸಂಘಗಳಿಂದ ನೀಡುವ ಸಾಲ–ಸೌಲಭ್ಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧ (೮೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳೆಷ್ಟು; ಅವುಗಳಲ್ಲಿ ಸಾಲಕ್ಕಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಹಾಗೂ ರೈತರಿಗೆ ಯಾವ ಯಾವ ರೀತಿಯ ಸಾಲ–ಸೌಲಭ್ಯ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಪ್ರತಿ ಸಹಕಾರ ಸಂಘಗಳಿಂದ ರೈತರಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಹಾಗೂ ಪ್ರಸ್ತುತ ಸಾಲಿನಲ್ಲಿ ನೀಡುತ್ತಿರುವ ಸಾಲದ ಮೊತ್ತವೆಷ್ಟು; ಸದರಿ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ? (ಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ವರ್ಗೀಕರಣ ಮತ್ತು ಸಿ.ಎಸ್.ಆರ್.ಫಂಡ್ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨ (೮೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಯಾವ ರೀತಿಯಲ್ಲಿ ವರ್ಗೀಕರಿಸಲಾಗಿದೆ ; ರಾಜ್ಯದಲ್ಲಿ ಇರುವ ಒಟ್ಟು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳೆಷ್ಟು ; ಅವು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್. ಫಂಡ್) ಅಂದರೇನು ; ಈ ಯೋಜನೆಯು ಯಾವ ವರ್ಷದಿಂದ ಜಾರಿಯಲ್ಲಿದೆ ; ಇದರ ಮಾರ್ಗಸೂಚಿಗಳಾವುವು ; (ಪೂರ್ಣ ವಿವರ ಒದಗಿಸುವುದು)

(ಇ) ಸದರಿ ಯೋಜನೆಯಡಿ ಇಲ್ಲಿಯವರೆಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ರಾಜ್ಯದಲ್ಲಿ ಎಷ್ಟು ಹಣ ಹೂಡಿಕೆ ಮಾಡಲಾಗಿದೆ ; ಬಳಕೆ ಮಾಡಲಾದ ಹಣ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ದಾವಣಗೆರೆ ಜಿಲ್ಲೆಯಲ್ಲಿ ವಿಲೇವಾರಿಯಾಗುವ ತ್ಯಾಜ್ಯದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩ (೮೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ ಜಿಲ್ಲೆಂಯು ನಗರಸಭೆ/ಪುರಸಭೆ/ ಪಟ್ಟಣ ಪಂಚಾಯಿತಿಗಳಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ತ್ಯಾಜ್ಯದ ಪ್ರಮಾಣವೆಷ್ಟು ; ಹಾಗೂ ಸದರಿ ತ್ಯಾಜ್ಯವನ್ನು ಜಿಲ್ಲೆಯ ಪ್ರತಿಯೊಂದು ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳ ಸಂಸ್ಥೆಯು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಯಾವ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ದಾವಣಗೆರೆ ಜಿಲ್ಲೆಯಲ್ಲಿ ನಗರಸಭೆ/ಪುರಸಭೆ/ ಪಟ್ಟಣ ಪಂಚಾಯಿತಿಗಳಲ್ಲಿ ತ್ಯಾಜ್ಯ ವಿಲೇವಾರಿ ಮಾಡಲು ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸದರಿಯವರಿಗೆ ನೀಡುತ್ತಿರುವ ವೇತನವೆಷ್ಟು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಕೆ.ಐ.ಎ.ಡಿ.ಬಿ ಯಿಂದ ಜಮೀನು ವಶಪಡಿಸಿಕೊಂಡಿರುವ ಬಗ್ಗೆ

**ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪ (೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆಯ ಬಂಗಾರಪೇಟೆ ಮತ್ತು ಕೆ.ಜಿ.ಎಫ್ ತಾಲ್ಲೂಕುಗಳಲ್ಲಿ ಬಿಜಿಎಮ್‌ಎಲ್ ಮತ್ತು ಬಿಇಎಮ್‌ಎಲ್ ವ್ಯಾಪ್ತಿಗೆ ಒಳಪಡುವ ಜಮೀನಿನ ವಿಸ್ತೀರ್ಣವೆಷ್ಟು ; (ಸರ್ವೆ ನಂಬರ್‌ವಾರು, ಗ್ರಾಮವಾರು ಮತ್ತು ವಿಸ್ತೀರ್ಣವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಬಿಜಿಎಮ್‌ಎಲ್ ಮತ್ತು ಬಿಇಎಮ್‌ಎಲ್ ಜಮೀನು ಪೈಕಿ ಎಷ್ಟು ವಿಸ್ತೀರ್ಣದ ಜಮೀನನ್ನು ಸರ್ಕಾರಕ್ಕೆ ಮರು ನಿಹಿತಗೊಳಿಸಲಾಗಿದೆ ; (ಸರ್ವೆ ನಂಬರ್‌ವಾರು, ಗ್ರಾಮವಾರು ಮತ್ತು ವಿಸ್ತೀರ್ಣವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಸರ್ಕಾರಕ್ಕೆ ಮರು ನಿಹಿತಗೊಳಿಸಿಕೊಂಡ ಜಮೀನನ್ನು ಯಾವ ಯಾವ ಉದ್ದೇಶಗಳಿಗೆ ಉಪಯೋಗಿಸಲಾಗಿದೆ, ಉಳಿಕೆ ಎಷ್ಟಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಈ ಪೈಕಿ ಕೆ.ಐ.ಎ.ಡಿ.ಬಿ ಪ್ರದೇಶಕ್ಕೆ ಎಷ್ಟು ಜಮೀನನ್ನು ನೀಡಲಾಗಿರುತ್ತದೆ ;

(ಉ) ಸದರಿ ಜಮೀನನ್ನು ಯಾವ ಯಾವ ಕೈಗಾರಿಕೆ/ಕಂಪನಿಗಳಿಗೆ ನೀಡಲಾಗಿದೆ ; ಪ್ರತಿ ಎಕರೆಗೆ ಎಷ್ಟು ಮೊತ್ತವನ್ನು ನಿಗದಿಗೊಳಿಸಲಾಗಿದೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಕೋಲಾರ ಜಿಲ್ಲೆಯಲ್ಲಿ ಕೈಗಾರಿಕೆ ಪ್ರದೇಶವೆಂದು ಘೋಷಿಸಿಲಾಗಿರುವ ಜಮೀನುಗಳ ಬಗ್ಗೆ

**ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫ (೬೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಘೋಷಿಸಲಾಗಿರುವ ಕೈಗಾರಿಕಾ ಪ್ರದೇಶಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ವಿಸ್ತೀರ್ಣವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಕೈಗಾರಿಕಾ ಪ್ರದೇಶವೆಂದು ಘೋಷಿಸಲಾಗಿರುವ ಜಮೀನುಗಳ ಪೈಕಿ ಯಾವ ಯಾವ ಜಮೀನನ್ನು ಯಾವ ಯಾವ ಕೈಗಾರಿಕಾ ಕಂಪನಿಗಳಿಗೆ ನೀಡಲಾಗಿದೆ ; ಪ್ರತಿ ಎಕರೆಗೆ ಎಷ್ಟು ಮೊತ್ತವನ್ನು ನೀಡಲು ನಿಗದಿಪಡಿಸಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಕೈಗಾರಿಕಾ ಪ್ರದೇಶವೆಂದು ಘೋಷಿಸಲಾಗಿರುವ ಜಮೀನಿನ ಪೈಕಿ ವಿವಿಧ ಉದ್ದೇಶಗಳಿಗೆ ನೀಡದೆ ಉಳಿಕೆ ಇರುವ ಜಮೀನಿನ ವಿಸ್ತೀರ್ಣವೆಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಿಂದ ಈ ತಹಲ್‌ವರೆಗೆ ಹೊಸದಾಗಿ ಕೈಗಾರಿಕಾ ಪ್ರದೇಶಗಳನ್ನು ಗುರುತಿಸಲಾಗಿರುವ ಜಮೀನಿನ ವಿಸ್ತೀರ್ಣ ಎಷ್ಟು? (ತಾಲ್ಲೂಕುವಾರು ಸಂಪೂರ್ಣವಾದ ಮಾಹಿತಿ ನೀಡುವುದು)

## ಹೂಡಿಕೆದಾರರ ಸಮಾವೇಶದಿಂದ ರಾಜ್ಯಕ್ಕೆ ಆಗಿರುವ ಪ್ರಯೋಜನೆಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬ (೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಐದು ವರ್ಷದಲ್ಲಿ ಎಷ್ಟು ಹೂಡಿಕೆದಾರರ ಸಮಾವೇಶಗಳನ್ನು ಆಯೋಜಿಸಲಾಗಿದೆ ;

(ಆ) ಇದರಲ್ಲಿ ಶಿವಮೊಗ್ಗ ಜಿಲ್ಲೆಗೆ ಬಂದಿರುವ ಹೂಡಿಕೆಗಳೆಷ್ಟು ; (ವಿವರ ಒದಗಿಸುವುದು)

(ಇ) ಸಮಾವೇಶದಲ್ಲಿ ಉದ್ಯಮಗಳು ಭರವಸೆ ನೀಡಿದಷ್ಟು ಹಣ ಹೂಡಿಕೆಯಾಗಿದೆಯೇ ; ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ಇದರಿಂದಾಗಿರುವ ಉದ್ಯೋಗ ಸೃಷ್ಟಿ ಎಷ್ಟು ; ( ಮಾಹಿತಿ ಒದಗಿಸುವುದು)

(ಈ) ಯಾವ ಯಾವ ಕ್ಷೇತ್ರದಲ್ಲಿ ಎಷ್ಟು ಹಣ ಹೂಡಿಕೆಯಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ನಗರ ಸ್ಥಳೀಯ ಸಂಸ್ಥೆಯ ಆಸ್ತಿಗಳಿಗೆ ಬಿ-ಖಾತಾ ವಿತರಣೆಯ ಬಗ್ಗೆ

**ಶ್ರೀ ಚಿದಾನಂದ ಎಂ ಗೌಡ (ಪದವೀಧರರ ಕ್ಷೇತ್ರ) :-**

೭ (೭೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸ್ಥಳೀಯ ಸಂಸ್ಥೆಗಳ ಆಸ್ತಿದಾರರಿಗೆ ಮೂರು ತಿಂಗಳಲ್ಲಿ ಬಿ-ಖಾತಾ ನೀಡಲು ಸರ್ಕಾರ ನಿರ್ಧರಿಸಿದೆಯೇ ; ಹಾಗಿದ್ದಲ್ಲಿ, ಈ ಅವಧಿಯಲ್ಲಿ ಎಲ್ಲರಿಗೂ ಖಾತಾ ಸಿಗುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ; ಇದಕ್ಕಾಗಿ ಮಾಡಿಕೊಂಡಿರುವ ಸಿದ್ಧತೆಗಳೇನು ;

(ಆ) ಸಾರ್ವಜನಿಕರು ಬಿ-ಖಾತಾ ಪಡೆಯಲು ನೀಡಬೇಕಾದ ದಾಖಲೆಗಳು ಯಾವುವು ;

(ಇ) ಮೊದಲ ಬಾರಿಗೆ ಬಿ-ಖಾತಾ ಪಡೆಯುವ ಸಾರ್ವಜನಿಕರಿಗೆ ದುಪ್ಪಟ್ಟು ತೆರಿಗೆ ವಿಧಿಸಲಾಗುತ್ತದೆಯೇ ; ಇದರಿಂದ ಸಾರ್ವಜನಿಕರಿಗೆ ಹೊರೆಯಾಗಿ ಆಸ್ತಿದಾರರು ಖಾತಾ ಪಡೆಯಲು ನಿರಾಸಕ್ತಿತೋರುವುದಿಲ್ಲವೇ ; ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ದುಪ್ಪಟ್ಟು ತೆರಿಗೆಯನ್ನು ಕೈಬಿಡಲಾಗುವುದೆ ;

(ಈ) ಪ್ರಸ್ತುತ ನೀಡುವ ಬಿ-ಖಾತಾವನ್ನು ಆಸ್ತಿ ವರ್ಗಾವಣೆಗೆ/ಮಾರಟಕ್ಕೆ ಪರಿಗಣಿಸಲಾಗುತ್ತದೆಯೇ ; ಪ್ರಸ್ತುತ ನೀಡುವ ಬಿ-ಖಾತಾವನ್ನು ಯಾವ ಉದ್ದೇಶಗಳಿಗೆ ಬಳಸಬಹುದಾಗಿದೆ ;

(ಉ) ತುಮಕೂರು ಜಿಲ್ಲೆಯ ಸಿರಾ ನಗರಸಭೆ ವ್ಯಾಪ್ತಿಯಲ್ಲಿ ಇರುವ ಒಟ್ಟು ಅನಧಿಕೃತ ನಿವೇಶನಗಳ ಸಂಖ್ಯೆ ಎಷ್ಟು ;

(ಊ) ಕಂದಾಯ ನಿವೇಶನಗಳಿಗೆ ಬಿ-ಖಾತಾ ನೀಡುವಾಗ ನಿವೇಶನ ಮತ್ತು ಮನೆಯ ಸ್ಥಳ ದೃಢೀಕರಣಕ್ಕಾಗಿ ಸದರಿ ನಿವೇಶನ/ ಮನೆಯ ಅಕ್ಷಾಂಶ ಮತ್ತು ರೇಖಾಂಶವನ್ನು ಸಂಗ್ರಹಿಸಿ ಖಾತಾ ಪತ್ರದಲ್ಲಿ ದಾಖಲಿಸಲಾಗುತ್ತದೆಯೇ ; ಇಲ್ಲದ್ದಿದಲ್ಲಿ, ನಿವೇಶನಗಳು ಸ್ಥಳ ದೃಢೀಕರಣಕ್ಕೆ ಅನುಸರಿಸುವ ವಿಧಾನ ಯಾವುದು ?

**ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಿಸಿದ ನಿವೇಶನಗಳ ಹಂಚಿಕೆ ಬಗ್ಗೆ**

**ಶ್ರೀ ಚಿದಾನಂದ ಎಂ ಗೌಡ (ಪದವೀಧರರ ಕ್ಷೇತ್ರ) :-**

೮ (೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೆ.ಐ.ಎ.ಡಿ.ಬಿ ಸಂಸ್ಥೆಯು ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಇಲ್ಲಿಯವರೆಗೆ ಕೆ.ಐ.ಎ.ಡಿ.ಬಿ ವತಿಯಿಂದ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಿಸಿದ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಹಂಚಿಕೆ ಮಾಡಲಾಗಿರುವ ಹಾಗೂ ಹಂಚಿಕೆಯಾಗದೆ ಇರುವ ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ ಯು ಸಿ.ಎ ನಿವೇಶಗಳನ್ನು ಮೇಲೆ ಹಂಚಿಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳಾವುವು ; ಇಲ್ಲಿಯವರೆಗೆ ರಚನೆಯಾದ ಸಿ.ಎ ನಿವೇಶನಗಳನ್ನು ಯಾರಿಗೆ ಹಂಚಲಾಗಿದೆ ; ಉಳಿಕೆ ನಿವೇಶಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ತುಮಕೂರು ಜಿಲ್ಲೆ ಸಿರಾ ತಾಲ್ಲೂಕಿನಲ್ಲಿ ಎಷ್ಟು ಕೈಗಾರಿಕಾ ಪ್ರದೇಶಗಳಿವೆ ; ಇದರಲ್ಲಿ ಎಷ್ಟು ಸ್ಥಳೀಯರಿಗೆ ಹಾಗೂ ಎಷ್ಟು ಹೊರ ರಾಜ್ಯದವರಿಗೆ ನಿವೇಶನ ಹಂಚಿಕೆ ಮಾಡಲಾಗಿದೆ ; ಇದರಿಂದ ಸೃಷ್ಟಿಯಾದ ಉದ್ಯೋಗಗಳ ಸಂಖ್ಯೆ ಎಷ್ಟು : ಇದರಲ್ಲಿ ಹಂಚಿಕೆಯಾದ ಮತ್ತು ಖಾಲಿರುವ ಸಿ.ಎ ನಿವೇಶನಗಳ ಸಂಪೂರ್ಣ ವಿವರ ನೀಡುವುದು ;

(ಉ) ಕೆ.ಐ.ಎ.ಡಿ.ಬಿ ವತಿಯಿಂದ ನಿವೇಶನ ಪಡೆದು ರಾಜ್ಯದಲ್ಲಿ ನಿರ್ಮಾಣವಾದ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗದಲ್ಲಿ ಮೀಸಲಾತಿ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಸ್ಥಳೀಯರಿಗೆ ಮೀಸಲಾತಿ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಕೈಗಾರಿಕಾ ಪ್ರದೇಶಕ್ಕೆ ವಶಪಡಿಸಿಕೊಂಡ ಭೂಮಿಗೆ ಪರಿಹಾರದ ಮೊತ್ತವನ್ನು ಯಾವ ರೀತಿಯಲ್ಲಿ ನಿಗದಿಪಡಿಸಲಾಗುತ್ತಿದೆ ?

**ರಾಜ್ಯದಲ್ಲಿರುವ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆ ಬಗ್ಗೆ**

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೯ (೫೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮರಳು ಗಣಿಗಾರಿಕೆಯಿಂದ ಬರುತ್ತಿರುವ ತೆರಿಗೆ ಹಣ ಎಷ್ಟು ;

(ಆ) ಹೊಸ ಮರಳು ಗಣಿಗಾರಿಕೆ ನೀತಿ ಅನ್ವಯ ಎಷ್ಟು ಮರಳು ಗಣಿಗಾರಿಕೆ ಬ್ಲಾಕ್‌ಗಳನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೫ ವರ್ಷಗಳಿಂದ ಅಕ್ರಮ ಗಣಿಗಾರಿಕೆಯಿಂದಾಗಿ ರಾಜ್ಯ ಸರ್ಕಾರಕ್ಕೆ ಆಗುತ್ತಿರುವ ತೆರಿಗೆ ನಷ್ಟ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಈ) ದಿನಾಂಕ: ೦೧.೦೧.೨೦೨೦ ರಿಂದ ೩೧.೦೧.೨೦೨೫ರ ವರೆಗೆ ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿದೆ ; ಎಷ್ಟು ದಂಡ ವಿಧಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಅಕ್ರಮ ಗಣಿಗಾರಿಕೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಊ) ರಾಜ್ಯದಲ್ಲಿ ಪ್ರತಿ ಟನ್ ಮರಳಿಗೆ ಸರ್ಕಾರ ಪ್ರಸ್ತುತ ನಿಗದಿಪಡಿಸಿರುವ ದರವೆಷ್ಟು ;

(ಋ) ಸರ್ಕಾರ ನಿಗದಿಪಡಿಸಿರುವ ದರಕ್ಕೂ ಗ್ರಾಹಕರಿಗೆ ಮಾರುಕಟ್ಟೆಯಲ್ಲಿ ಸಿಗುತ್ತಿರುವ ಮರಳಿನ ದರಕ್ಕೂ ಬಹಳ ವ್ಯತ್ಯಾಸವಿದ್ದು, ಇದರಿಂದ ಗ್ರಾಹಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಿರುವ ಯೋಜನೆಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦ (೯೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳಾವುವು ; (ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು ;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ವಿವರ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ ; ಎಷ್ಟು ಸಬ್ಸಿಡಿಯನ್ನು ನೀಡಲಾಗುತ್ತದೆ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯ ಸಣ್ಣ ಕೈಗಾರಿಕೆ ಉದ್ಯಮಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧ (೯೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳಿವೆ ಮತ್ತು ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ಯಮಗಳಾವುವು ; (ವಿವರ ನೀಡುವುದು)

(ಆ) ಸಣ್ಣ ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ಯಮಗಳು, ಸೊಸೈಟಿಗಳು ಹಾಗೂ ಇತರೆ ಅಂಗ ಸಂಸ್ಥೆಗಳಾವುವು ;

(ಇ) ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆ ಘಟಕಗಳು ಪ್ರಾರಂಭವಾಗಿ ಕಾರ್ಯಚರಣೆಯಲ್ಲಿವೆ ; ಇವುಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳೇನು ? (ವಿವರ ನೀಡುವುದು)

## ಇ–ಖಾತೆಗಳನ್ನು ಸಕಾಲಕ್ಕೆ ನೀಡದಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨ (೯೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರಸಭೆ ಮತ್ತು ಪುರಸಭೆಗಳಲ್ಲಿ ಇ–ಖಾತೆಗಾಗಿ ಅರ್ಜಿ ಸಲ್ಲಿಸಿದ ನಂತರ ಎಷ್ಟು ದಿನಗಳಲ್ಲಿ ಇ–ಖಾತಾ ಮಾಡಬೇಕೆಂದು ಸರ್ಕಾರದ ಆದೇಶವಿರುತ್ತದೆ ; (ಆದೇಶದ ಪ್ರತಿ ನೀಡುವುದು)

(ಆ) ಇ–ಖಾತಾಗಾಗಿ ಅರ್ಜಿ ಮತ್ತು ಇತರೆ ದಾಖಲೆಗಳನ್ನು ಸಲ್ಲಿಸಿದ ನಂತರ ತಿಂಗಳಾನುಗಟ್ಟಲೇ ವಿಳಂಬ ಆಗುತ್ತಿರುವುದು ನಿಜವೇ ;

(ಇ) ಬೆಂಗಳೂರು ಜಿಲ್ಲೆಯ ನಗರಸಭೆ ಮತ್ತು ಪುರಸಭೆಗಳಲ್ಲಿ ಕಳೆದ ಒಂದು ವರ್ಷದಲ್ಲಿ ಇ–ಖಾತೆಗಾಗಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ;

(ಈ) ನಗರಸಭೆಯ ಕಂದಾಯ ಶಾಖೆಯಲ್ಲಿ ನೀಡುವ ವಿವಿಧ ನಕಲು ಪ್ರತಿಗಳಿಗೆ ವಿಧಿಸುವ ಶುಲ್ಕವೆಷ್ಟು ?

## ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಈವರೆಗೂ ಕೆ.ಐ.ಎ.ಡಿ.ಬಿಯಿಂದ ಭೂ ಸ್ವಾಧೀನಗೊಂಡಿರುವ ಭೂಮಿಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩ (೯೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ ಕಳೆದ ೨ ವರ್ಷಗಳಿಂದ ಎಷ್ಟು ಎಕರೆ ಭೂಮಿಯನ್ನು ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಕಳೆದ ೨ ವರ್ಷಗಳಿಂದ ಎಷ್ಟು ಎಕರೆಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದೆ ಮತ್ತು ಅಂತಿಮ ಅಧಿಸೂಚನೆಯಲ್ಲಿ ಎಷ್ಟು ಎಕರೆ ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ ;

(ಇ) ಪ್ರಸ್ತುತ ಬೆಂಗಳೂರು ಜಿಲ್ಲೆಯ ಸುತ್ತಮುತ್ತಲಿನ ಯಾವ ಯಾವ ಜಾಗಗಳಲ್ಲಿ ಎಷ್ಟು ಎಕರೆ ಭೂ ಸ್ವಾಧೀನ ಮಾಡಲು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಭೂಮಿಯ ಪ್ರಸ್ತುತ ಮಾರುಕಟ್ಟೆಯ ಬೆಲೆಯು ಎಷ್ಟು ಪಟ್ಟು ಹಣವನ್ನು ರೈತರಿಗೆ/ಭೂ ಮಾಲೀಕರಿಗೆ ನೀಡಲಾಗಿದೆ ? (ವಿವರ ನೀಡುವುದು)

## ಹಾಪ್‌ಕಾಮ್ಸ್ ಮಳಿಗೆಗಳನ್ನು ಬಂದ್ ಮಾಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪ (೫೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು ; ಇರುವ ಮಳಿಗೆಗಳಲ್ಲಿ ಪ್ರಸ್ತುತ ಎಷ್ಟು ಹಾಪ್‌ಕಾಮ್ಸ್‌ಗಳು ವಹಿವಾಟು ನಡೆಸುತ್ತಿವೆ ; ಎಷ್ಟು ಮಳಿಗೆಗಳನ್ನು ಬಂದ್ ಮಾಡಲಾಗಿದೆ ; ಬಂದ್ ಆಗಲು ಇರುವ ಕಾರಣಗಳೇನು ;

(ಆ) ಹಾಪ್‌ಕಾಮ್ಸ್ ಮಳಿಗೆಯಲ್ಲಿ ಯಾವ ಯಾವ ಪದಾರ್ಥಗಳನ್ನು ಮಾರಾಟ ಮಾಡಬೇಕೆಂಬ ನಿಯಮ ಇದೆ ಕೆಲವೊಂದು ಮಳಿಗೆಗಳಲ್ಲಿ ಖಾಸಗಿ ವ್ಯಕ್ತಿಗಳು ಹಣ್ಣುಗಳನ್ನು ಮಾರಾಟ ಮಾಡುತ್ತಿದ್ದು ಅದು ಹಾಪ್‌ಕಾಮ್ಸ್ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಂಗಳೂರು ನಗರ ಭಾಗದ ಅನೇಕ ಕಡೆ ಹಾಪ್ ಕಾಮ್ಸ್ ಮಳಿಗೆಗಳಲ್ಲಿ ಅಕ್ಕಿ ಮೂಟೆ ಹಾಗೂ ಇನ್ನಿತರ ತೋಟಗಾರಿಕೆಯ ಬೆಳೆಗಳಲ್ಲದ ಸಾಮಾಗ್ರಿಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಮಳಿಗೆಗಳನ್ನು ಪರಿಶೀಲಿಸಲಾಗಿದೆ ; ತೆಗೆದುಕೊಂಡ ಕ್ರಮವೇನು ; ಇದರಿಂದ ರೈತರಿಗೆ ಅನಾನುಕೂಲವಾಗುವುದಿಲ್ಲವೇ ;

(ಉ) ಪ್ರಸ್ತುತ ಎಷ್ಟು ಸಿಬ್ಬಂದಿಗಳು ಈ ಹಾಪ್‌ಕಾಮ್ಸ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ, ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆಯೆಷ್ಟು ?

## ಕೊಪ್ಪಳ ಜಿಲ್ಲೆಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫ (೮೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳೆಷ್ಟು ; ಇವುಗಳಲ್ಲಿ ಸಾಲಕ್ಕಾಗಿ ಬಂದ ಅರ್ಜಿಗಳೆಷ್ಟು ; ಹಾಗೂ ಸಹಕಾರ ಸಂಘಗಳಿಂದ ರೈತರಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸಾಲಕ್ಕಾಗಿ ಬಂದ ಅರ್ಜಿಗಳಲ್ಲಿ ಸಾಲ ಸಿಗದೇ ಇರುವ ರೈತರ ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು ; (ವಿವರ ನೀಡುವುದು) ಮತ್ತು ಈ ಹಿಂದೆ ಸಾಲ ಪಡೆದ ರೈತರಿಗೆ ಬೆಳೆ ಹಾನಿಯಾದ ರೈತರಿಗೆ ಸಾಲ ಮನ್ನಾ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಈ ಸಹಕಾರ ಸಂಘಗಳಿಂದ ರೈತರಿಗೆ ಯಾವ ಯಾವ ಸಾಲ ಸೌಲಭ್ಯ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಈಗ ನೀಡುತ್ತಿರುವ ಸಾಲದ ಮೊತ್ತವೆಷ್ಟು ; ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ಪೌರಾಡಳಿತ ಇಲಾಖೆಯಿಂದ ಮೇಲ್ದರ್ಜೆಗೇರಿಸುವ ವಿಷಯಗಳ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬ (೧೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪೌರಾಡಳಿತ ಇಲಾಖೆಯಿಂದ ಮೇಲ್ದರ್ಜೇಗೇರಿಸಲು ಪುರಸಭೆ ಪಟ್ಟಣ ಪಂಚಾಯತ್, ನಗರಸಭೆಗಳಲ್ಲಿ ನಾಲ್ಕೈದು ವರ್ಷಗಳಿಂದ ಚುನಾವಣೆ ನಡೆಸದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಚುನಾವಣೆ ನಡೆಸದೇ ನಗರಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಮೇಲ್ದರ್ಜೆಗೇರಿಸಲು ಪುರಸಭೆ, ನಗರಸಭೆಗಳ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿದೆ ; (ವಿವರ ನೀಡುವುದು)

(ಈ) ಇಲಾಖೆಯಲ್ಲಿ ಎಷ್ಟು ಮಂದಿ ನೌಕರರಿಗೆ ಅರ್ಹತೆ ಇಲ್ಲದೇ ಮೇಲ್ದರ್ಜೆಯ ಹುದ್ದೆಗೆ ಅನುಮತಿ ನೀಡಲಾಗಿದೆ ? (ವಿವರ ನೀಡುವುದು)

## ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಮ್ಮಿಕೊಂಡ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭ (೧೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ "ಸಾರ್ವಜನಿಕ ಉದ್ದೇಶಕ್ಕಾಗಿ" ಮೀಸಲು ಇಟ್ಟ ಸೈಟುಗಳ ಸಂಖ್ಯೆ ಎಷ್ಟು ; ಯಾವ ಯಾವ ಉದ್ದೇಶಕ್ಕಾಗಿ ವಿತರಿಸಲಾಗಿದೆ ; (ವಿವರ ನೀಡುವುದು)

(ಆ) ಮೂಡಾದಿಂದ ಎಷ್ಟು ಸೈಟುಗಳು ವಿತರಿಸದೇ ಬಾಕಿ ಉಳಿದಿವೆ ; ನಗರಾಭಿವೃದ್ಧಿ ಪ್ರಾಧಿಕಾರವು ಖಾಸಗಿ ಭೂಮಿಯನ್ನು ಖರೀದಿಸಿ ಹಣ ಪಾವತಿಸಿ ಭೂಮಿಯನ್ನು ತನ್ನ ವಶಕ್ಕೆ ಪಡೆಯಲು ವಿಫಲರಾದ ಪ್ರಕರಣದ ಬಗ್ಗೆ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಕಳೆದ ೦೩ ವರ್ಷಗಳಿಂದ ಮಂಗಳೂರು ನಗರ ವ್ಯಾಪ್ತಿಯ ಮೂಡಾದಿಂದ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಮಹಾನಗರ ಪಾಲಿಕೆಯ ಮೂಡಾ ವ್ಯಾಪ್ತಿಯಲ್ಲಿ ಎಷ್ಟು ಲೇಔಟ್‌ಗಳನ್ನು ರಚಿಸಲಾಗಿದೆ ; ಎಷ್ಟು ಸೈಟ್‌ಗಳನ್ನು ಸಾರ್ವಜನಿಕರಿಗೆ ನೀಡಲಾಗಿದೆ ; ಎಷ್ಟು ಖಾಸಗಿ ಭೂಮಿಯನ್ನು ಯಾವ ದರದಲ್ಲಿ ಪಡೆಯಲಾಗಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಇಲಾಖೆಯಿಂದ ಸ್ಥಾಪಿಸಿದ ಕೈಗಾರಿಕೆಗಳ ಬಗ್ಗೆ

**ಶ್ರೀ ಐವಾನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :**

೧೮ (೧೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಇಲಾಖೆಯಿಂದ ಕಳೆದ ೦೩ ವರ್ಷಗಳಿಂದ ಸ್ಥಾಪಿಸಿದ ಕೈಗಾರಿಕೆಗಳ ಸಂಖ್ಯೆ ಎಷ್ಟು ; ಯಾವ ಯಾವ ಭಾಗದಲ್ಲಿ ಸ್ಥಾಪಿಸಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ, ಪುತ್ತೂರು ಮತ್ತು ಬೆಳ್ತಂಗಡಿ ತಾಲ್ಲೂಕಿನಲ್ಲಿ ವಿಶೇಷ ಕೈಗಾರಿಕೆ ವಲಯ ಸ್ಥಾಪಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಇ) ಸಣ್ಣ ಕೈಗಾರಿಕೆ ಪ್ರಾರಂಭಿಸಲು ಇಲಾಖೆ ಹೊಂದಿರುವ ನೀತಿಗಳೇನು ; ಪ್ರೋತ್ಸಾಹ ನೀಡಲು ಇಲಾಖೆ ತಂದಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಈ) ಬೀಡಿ ಕಾರ್ಮಿಕರು ತಮ್ಮ ಉದ್ಯೋಗವನ್ನು ಕಳೆದುಕೊಳ್ಳುತ್ತಿದ್ದು, ಈಗ ಪುನರ್ ವಸತಿ ಕಲ್ಪಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)

## ಇನ್ವೆಸ್ಟ್ ಕರ್ನಾಟಕ ೨೦೨೫ರಲ್ಲಿ ಕರಾವಳಿ ಭಾಗಕ್ಕೆ ಮಂಜೂರುಗೊಂಡಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) ಹಾಗೂ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯ (೧೪+೩೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇನ್ವೆಸ್ಟ್ ಕರ್ನಾಟಕ ೨೦೨೫ರಲ್ಲಿ ಕರಾವಳಿ ಭಾಗದ ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಗಳನ್ನು ಪ್ರಾರಂಭಿಸಲು ಮಂಜೂರು ಗೊಂಡಿದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಮೊತ್ತದ ಕೈಗಾರಿಕೆಗಳನ್ನು ದೇಶದ ಮತ್ತು ರಾಜ್ಯದ ಯಾವ ಯಾವ ಭಾಗದಲ್ಲಿ ಉದ್ದಿಮೆ ಪ್ರಾರಂಭಿಸಲು ಇನ್ವೆಸ್ಟ್ ಕರ್ನಾಟಕದಲ್ಲಿ ತೀರ್ಮಾನಿಸಲಾಗಿದೆ ಹಾಗೂ ಇಲಾಖೆಯು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು) ಇದರಿಂದ ದೊರೆಯುವ ಉದ್ಯೋಗ ಅವಕಾಶಗಳು ಎಷ್ಟು ; ಉದ್ಯೋಗ ನೀಡುವುದಕ್ಕೆ ಷರತ್ತುಗಳನ್ನು ವಿಧಿಸಲಾಗಿದೆಯೇ ;

(ಇ) ಕರಾವಳಿ ಭಾಗದ ಮಂಗಳೂರಿನಲ್ಲಿ ಪಂಚತಾರ ಹೋಟೆಲ್ ಪ್ರಾರಂಭಿಸಲು ಅವಕಾಶಗಳಿದ್ದು, **CRZ** ನಿಯಮಗಳ ತೊಂದರೆಗಳಿಂದ ಕರಾವಳಿ ಭಾಗದಲ್ಲಿ ಕೈಗಾರಿಕೆ ಪ್ರಾರಂಭಿಸಲು ಹಿಂದೇಟು ಹಾಕುತ್ತಿರುವುದರಿಂದ ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು) ನಿಯಮ ಸಡಿಲಿಕೆಗೆ ಇಲಾಖೆ ಕೈಗೊಂಡಿರುವ ಯೋಜನೆಗಳು ಯಾವುವು ;

(ಈ) ಇನ್ವೆಸ್ಟ್ ಕರ್ನಾಟಕ ೨೦೨೫ ರಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಮೊತ್ತದ ಬಂಡವಾಳ ಹೂಡಿಕೆಗೆ ವಿವಿಧ ಕಂಪನಿಗಳೊಂದಿಗೆ ಒಪ್ಪಂದ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಮೊತ್ತದ ಬಂಡವಾಳ ಹೂಡಿಕೆಗೆ ಒಪ್ಪಂದ ಆಗಿದೆ; ೦ಯಾವ ಕಂಪನಿಗಳೊಂದಿಗೆ ಒಪ್ಪಂದ ಆಗಿದೆ ; (ವಿವರ ಒದಗಿಸುವುದು) ಯಾವ ತರನಾದ ಉದ್ಯಮಗಳಿಗೆ ಬಂಡವಾಳ ಹೂಡಲು ಒಪ್ಪಂದ ಆಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಪುತ್ತೂರು ನಗರಸಭೆಯ ಅಭಿವೃದ್ಧಿ ಯೋಜನೆಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦ (೩೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ನಗರಸಭೆಗೆ ಕಳೆದ ೦೨ ವರ್ಷಗಳಲ್ಲಿ ಎಷ್ಟು ಅನುದಾನ ಮಂಜೂರು ಮಾಡಿದೆ ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ ; ಎಷ್ಟು ಅನುದಾನ ಖರ್ಚಾಗಿದೆ; (ವಿವರ ನೀಡುವುದು)

(ಆ) ೨೦೨೫-೨೬ ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸದರಿ ನಗರಸಭೆಗೆ ಅಭಿವೃದ್ಧಿ ಕಾರ್ಯಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಯಾವ ಯಾವ ಕಾಮಗಾರಿಗಳನ್ನು ಮಾಡಲಾಗುವುದು ;

(ಇ) ಪುತ್ತೂರು ನಗರಸಭಾ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ಯಾವ ಯೋಜನೆ ರೂಪಿಸಲಾಗಿದೆ ; ಕಳೆದ ೦೨ ವರ್ಷಗಳಲ್ಲಿ ಎಷ್ಟು ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; (ರಸ್ತೆಗಳ ವಿವರ ನೀಡುವುದು)

(ಈ) ಪುತ್ತೂರು ನಗರಸಭೆಯ ೨೦೨೨-೨೩ರ ಸಾಲಿನ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ವಿಕಲಚೇತನ ಫಲಾನುಭವಿಗಳಿಗೆ ಸಹಾಯಧನ ಪಾವತಿಸಲು ಮೀಸಲಿಟ್ಟ ಅನುದಾನವನ್ನು ಯಾವ ಕಾಲಮಿತಿಯೊಳಗಡೆ ಬಿಡುಗಡೆ ಮಾಡಲಾಗುವುದು ?

## ಅಕ್ರಮ ಮರಳು ಗಣಿಗಾರಿಕೆ ತಡೆಯುವ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧ (೩೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿ (ಊರು) ಪರವಾನಗಿ ಪಡೆದು ಮರಳು ಗಣಿಗಾರಿಕೆ ನಡೆಸಲಾಗುತ್ತಿದೆ ; ೨೦೨೩ ರಿಂದ ಈವರೆಗೆ ನದಿಗಳಿಂದ ಎಷ್ಟು ಮೆಟ್ರಿಕ್ ಟನ್ ಮರಳು ತೆಗೆಯಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೦೨ ವರ್ಷಗಳಲ್ಲಿ ಸದರಿ ಜಿಲ್ಲೆಗಳಿಂದ ಮರಳು ಗಣಿಗಾರಿಕೆಯಿಂದ ಸರ್ಕಾರಕ್ಕೆ ಎಷ್ಟು ಆದಾಯ ಬಂದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ನೆರೆಯ ಕೇರಳ ರಾಜ್ಯಕ್ಕೆ ಕರಾವಳಿ ಭಾಗದಿಂದ ಮರಳನ್ನು ಸಾಗಿಸಲು ಅನುಮತಿಸಲಾಗಿದೆಯೇ ; ಅನುಮತಿಸಿದ್ದರೆ ಕಳೆದ ೦೩ ವರ್ಷಗಳಲ್ಲಿ ಕೇರಳಕ್ಕೆ ಎಷ್ಟು ಮರಳನ್ನು ಸಾಗಿಸಲಾಗಿದೆ ; ಕಾನೂನು ಬಾಹಿರವಾಗಿ ಕೇರಳಕ್ಕೆ ಮರಳು ಸಾಗಿಸುವವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ; ಈವರೆಗೆ ಎಷ್ಟು ಎಫ್.ಐ.ಆರ್‌ಗಳನ್ನು ದಾಖಲಿಸಲಾಗಿದೆ ; (ವಿವರ ನೀಡುವುದು)

(ಈ) ಪ್ರಸ್ತುತ ಕೇರಳ ರಾಜ್ಯಕ್ಕೆ ಮರಳು ಸಾಗಿಸಲಾಗುತ್ತಿದೆಯೇ ? (ಕೇರಳಕ್ಕೆ ಮರಳು ಸಾಗಿಸಲು ಪರವಾನಗಿ ಪಡೆದವರ ವಿವರ ನೀಡುವುದು)

## ಸಣ್ಣ ಕೈಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾವರು) :-**

೨೨ (೪೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದಮೇಲೆ ಸಣ್ಣ ಕೈಗಾರಿಕೆಯಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಈ ಯೋಜನೆಗಳಲ್ಲಿ ಬಡತನ ರೇಖೆಗಿಂತ ಕೆಳಗಿನವರಿಗಾಗಿ ಯಾವ ಯಾವ ಯೋಜನೆಯನ್ನು ಕೈಗೊಳ್ಳಲಾಗಿದೆ ;

(ಆ) ರಾಜ್ಯದಲ್ಲಿ ಕೈಗಾರಿಕೆ ನಿವೇಶನಕ್ಕೆ ಮಂಜೂರಾದ ಎಷ್ಟು ಫಲಾನುಭವಿಗಳು ಹಣ ತುಂಬಿರುವುದಿಲ್ಲ ; ಹಣ ತುಂಬದೆ ಇರುವವರ ಹಂಚಿಕೆಯನ್ನು ರದ್ದುಪಡಿಸಿ ನಿಯಮಾನುಸಾರ ಬೇರೆಯವರಿಗೆ ಹಂಚಿಕೆ ಮಾಡಲಾಗಿದೆಯೇ ;

(ಇ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಹೊಸ ಯೋಜನೆಗಳು ಜಾರಿಗೆ ಬಂದಿವೆ ; ನಿರುದ್ಯೋಗಿ ಪದವೀಧರರುಗಳು ಸ್ವಂತ ಉದ್ದಿಮೆ ಹೊಂದಲು ಮುಂದೆ ಬರುವವರನ್ನು ಉತ್ತೇಜಿಸಲು ಯಾವ ಯಾವ ಹೊಸ ಯೋಜನೆ ಹಾಕಿಕೊಳ್ಳಲು ಸರ್ಕಾರ ನಿರ್ಧರಿಸಿದೆ ;

(ಈ) ಸಮೃದ್ಧಿ ಕರ್ನಾಟಕ ನಿರ್ಮಿಸಲು ಸಣ್ಣ ಕೈಗಾರಿಕೆ ಇಲಾಖೆಯ ಪಾತ್ರಗಳೇನು ;

(ಉ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಕೈಗಾರಿಕೆ ನಿವೇಶನಗಳು ಖಾಲಿ ಇವೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಉತ್ತರ ಕರ್ನಾಟಕಕ್ಕೆ ಹೂಡಿರುವ ಬಂಡವಾಳದ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾವರು) :-**

೨೩ (೪೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೫-೨೬ನೇ ಸಾಲಿನಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಉತ್ತರ ಕರ್ನಾಟಕಕ್ಕೆ ಸಂಬಂಧಿಸಿದಂತೆ ಎಷ್ಟು ಉದ್ದಿಮೆದಾರರು ಸರ್ಕಾರದ ಜೊತೆಗೆ ಒಡಂಬಡಿಕೆ ಮಾಡಿಕೊಂಡಿದ್ದಾರೆ; (ಜಿಲ್ಲಾವಾರು ಉದ್ದಿಮೆದಾರರ ಹೆಸರಿನೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಉದ್ದಿಮೆದಾರರು ಹೂಡಿಕೆ ಮಾಡಿರುವ ಬಂಡವಾಳವೆಷ್ಟು; ಇದರಿಂದ ಉತ್ಪಾದನೆಯಾಗುವ ವಸ್ತುಗಳಾವುವು ; ಇವುಗಳಿಂದ ಎಷ್ಟು ಉದ್ಯೋಗಗಳು ಸೃಷ್ಟಿಯಾಗಲಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ವಿಜಯಪುರ ಜಿಲ್ಲೆಗೆ ಹರಿದು ಬಂದ ಬಂಡವಾಳವೆಷ್ಟು ; ಮತ್ತು ಯಾವ ಉದ್ದಿಮೆಗಳಿಂದ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಉದ್ದಿಮೆಗಳು ಪೂರ್ಣ ಪ್ರಮಾಣದಲ್ಲಿ ಯಾವಾಗ ಪ್ರಾರಂಭ ಮಾಡುವುದು ?

## ಸ್ಮಾರ್ಟ್ ಸಿಟಿ ಯೋಜನೆಯ ಅನುದಾನದ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾವರು) :-**

೨೪ (೪೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ರಾಜ್ಯದ ವಿವಿಧ ನಗರಗಳ ಅಭಿವೃದ್ಧಿಗೆ ಕೇಂದ್ರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದ ಮೂಲಕ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಈ ಅನುದಾನದಿಂದ ಕೈಗೊಂಡ ಕಾಮಗಾರಿಗಳು ಯಾವ ಹಂತದಲ್ಲಿವೆ ; (ಮಾಹಿತಿ ನೀಡುವುದು)

(ಇ) ಸರ್ಕಾರವು ಅನುದಾನವನ್ನು ಬಳಸಿಕೊಳ್ಳುವಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗಿದೆಯೇ ; ಆಗಿದ್ದರೆ, ಯಾವ ಕಾರಣಕ್ಕಾಗಿ ? (ಮಾಹಿತಿ ಒದಗಿಸುವುದು)

## ಬಾಗಲಕೋಟೆ ಜಿಲ್ಲೆಯ ಜವಳಿ ಉದ್ಯಮ ಪಾರ್ಕ್ ನಿರ್ಮಾಣ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾವರು) :-**

೨೫ (೪೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭವಾಗುವುದು ;

(ಆ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಜವಳಿ ಪಾರ್ಕ್‌ಗಳು ಎಷ್ಟು ; ಯಾವ ಜಿಲ್ಲೆಯ ಯಾವ ಸ್ಥಳಗಳಲ್ಲಿ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಸ್ಥಗಿತಗೊಂಡಿರುವ ಜವಳಿ ಪಾರ್ಕ್‌ಗಳೆಷ್ಟು ; ಸ್ಥಗಿತಗೊಂಡಿದ್ದಲ್ಲಿ, ಕಾರಣಗಳೇನು ; ಸದರಿ ಜವಳಿ ಪಾರ್ಕ್‌ನ್ನು ಪುನಶ್ಚೇತನಗೊಳಿಸಲು ಸರ್ಕಾರದ ಕ್ರಮವೇನು ; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಅತಿ ಹೆಚ್ಚು ಜವಳಿ ಕಾರ್ಮಿಕರು ತೇರದಾಳ ಮತಕ್ಷೇತ್ರದಲ್ಲಿ ನೆಲೆಸಿದ್ದು, ಈ ತಾಲ್ಲೂಕಿನಲ್ಲಿ ಹೊಸದಾಗಿ ಜವಳಿ ಪಾರ್ಕ್ ನಿರ್ಮಾಣ ಮಾಡುವುದರ ಬಗ್ಗೆ ಸರ್ಕಾರದ ನಿಲುವೇನು ?

## ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯದ ಕಾರ್ಖಾನೆಯಲ್ಲಿ ಎಥೆನಾಲ್ ಘಟಕ ಸ್ಥಾಪನೆ ಕುರಿತು.

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೬ (೮೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಸ್ವಾಮ್ಯದ ದಿ ಮೈಸೂರು ಷುಗರ್ ಕಂಪೆನಿ ಲಿ., ಮಂಡ್ಯದ ಕಾರ್ಖಾನೆಯಲ್ಲಿ ಎಥೆನಾಲ್ ಘಟಕ ಸ್ಥಾಪಿಸುವ ಕುರಿತಂತೆ ಪರಿಶೀಲನೆಯಲ್ಲಿದ್ದ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆಯೇ ; ಇದ್ದಲ್ಲಿ, ಯೋಜನೆಗೆ ಅನುಮೋದನೆ ನೀಡಿರುವ ಆದೇಶ ಪ್ರತಿ ಹಾಗೂ ಈ ಬಗ್ಗೆ ಸಂಪೂರ್ಣ ಮಾಹಿತಿ ತಿಳಿಸುವುದು ;

(ಆ) ಸದರಿ ಕಾರ್ಖಾನೆಯಲ್ಲಿ ಎಷ್ಟು ಕೋಟಿ ಅಂದಾಜು ವೆಚ್ಚದಲ್ಲಿ ಎಥೆನಾಲ್ ಘಟಕ ಸ್ಥಾಪಿಸಲು ಉದ್ದೇಶಿಸಲಾಗಿದೆ ; ಪ್ರಾರಂಭಿಕವಾಗಿ ಎಷ್ಟು ಕೋಟಿ ರೂಪಾಯಿ ಅನುದಾನ ಒದಗಿಸಲು ಹಣಕಾಸು ಇಲಾಖೆ ಅನುಮತಿಸಿದೆ ಅಥವಾ ಈ ಬಗ್ಗೆ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; (ವಿವರ ನೀಡುವುದು)

(ಇ) ಸದರಿ ಕಾರ್ಖಾನೆಯಲ್ಲಿ ಎಥೆನಾಲ್ ಘಟಕ ಸ್ಥಾಪಿಸುವ ಕುರಿತಂತೆ ಸರ್ಕಾರಕ್ಕೆ ಸಲ್ಲಿಸಲಾಗಿರುವ ವಿಸ್ತ್ರತ ಯೋಜನಾ ವರದಿಯ (ಡಿ.ಪಿ.ಆರ್.) ಮುಖ್ಯಾಂಶಗಳೇನು ; (ವರದಿಯ ಪ್ರತಿ ನೀಡುವುದು) ಸದರಿ ಕಾರ್ಖಾನೆಯಲ್ಲಿ ಹೊಸ ಮಿಲ್, ಬಾಯ್ಲರ್ ಘಟಕ ಅಳವಡಿಕೆ ಹಾಗೂ ಹಾಲಿ ಇರುವ ಸಕ್ಕರೆ ಉತ್ಪಾದನಾ ವಿಭಾಗವನ್ನು ಆಧುನೀಕರಣಗೊಳಿಸುವುದು ಸೇರಿದಂತೆ ಇನ್ನಿತರೆ ಅಭಿವೃದ್ಧಿ ಕೆಲಸಗಳಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಮಂಡ್ಯ ಜಿಲ್ಲೆಯಲ್ಲಿರುವ ಸಕ್ಕರೆ ಕಾರ್ಖಾನೆಗಳ ಪೈಕಿ ಎಥೆನಾಲ್ ಘಟಕ ಹೊಂದಿರುವ ಮತ್ತು ಹೊಂದಿಲ್ಲದಿರುವ ಕಾರ್ಖಾನೆಗಳು ಯಾವುವು ವಿವರ ನೀಡುವುದು ? (ಕಾರ್ಖಾನೆವಾರು ಕಬ್ಬು ನುರಿಸುವ ಸಾಮರ್ಥ್ಯ ಮತ್ತು ಡಿಸ್ಟಿಲರಿ ಸಾಮರ್ಥ್ಯದ ವಿವರ ನೀಡುವುದು)

## ಕಬ್ಬು ಬೆಳೆಗಾರರಿಗೆ ಹೆಚ್ಚುವರಿ ಬೆಲೆ ಪಾವತಿ ಆಗದಿರುವ ಬಗ್ಗೆ

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೭ (೮೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೨–೨೩ನೇ ಹಂಗಾಮಿನಲ್ಲಿ ಪ್ರತಿ ಮೆ.ಟನ್‌ಗೆ ಎಫ್‌ಆರ್‌ಪಿ ದರಕ್ಕೆ ಮೇಲ್ಪಟ್ಟು ಪ್ರತಿ ಟನ್‌ಗೆ ರೂ. ೧೦೦ ರಂತೆ ಹಾಗೂ ಎಥೆನಾಲ್ ಘಟಕಗಳನ್ನು ಹೊಂದಿರುವ ಸಕ್ಕರೆ ಕಾರ್ಖಾನೆಗಳು ಹೆಚ್ಚುವರಿ ರೂ. ೫೦ ರಂತೆ ಹೀಗೆ ಒಟ್ಟು ರೂ. ೧೫೦ ಗಳನ್ನು ಪಾವತಿಸುವಂತೆ ಸರ್ಕಾರ ಆದೇಶ ಹೊರಡಿಸಿತ್ತು. ಆದರೆ, ಈವರೆವಿಗೂ ಹೆಚ್ಚುವರಿ ಬೆಲೆ ರೈತರಿಗೆ ಪಾವತಿ ಆಗಿಲ್ಲ, ಈ ಕುರಿತು ಸರ್ಕಾರದ ಕ್ರಮವೇನು ;

(ಆ) ಸದರಿ ವಿಷಯ ಕುರಿತು ಘನ ಉಚ್ಚ ನ್ಯಾಯಾಲಯದ ಆದೇಶದಂತೆ ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳ ಆದಾಯ ಪ್ರಾಪ್ತಿ ಅಂಕಿ–ಅಂಶಗಳನ್ನು ಕ್ರೋಢೀಕರಿಸಲಾಗಿದೆಯೇ ; ಹಾಗೂ, ತಜ್ಞರ ಸಮಿತಿ ಹಾಗೂ ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ಮಂಡಿಸಲಾಗಿದೆಯೇ ; (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು)

(ಇ) ರೈತರಿಗೆ ಹೆಚ್ಚುವರಿ ಮೊತ್ತ ಪಾವತಿಸಲು ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ತೀರ್ಮಾನ ಆಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಹಾಗೂ ಇದರಿಂದ ಎಷ್ಟು ಮಂದಿ ರೈತರಿಗೆ ಪ್ರಯೋಜನ ದೊರೆಯಲಿದೆ ; ಪಾವತಿಸಬಹುದಾದ ಅಂದಾಜು ಹೆಚ್ಚುವರಿ ಒಟ್ಟು ಮೊತ್ತ ಎಷ್ಟು ;

(ಈ) ರಾಜ್ಯದಲ್ಲಿ ಎಥೆನಾಲ್ ಘಟಕ ಹೊಂದಿರುವ ಮತ್ತು ಹೊಂದಿಲ್ಲದಿರುವ ಸಕ್ಕರೆ ಕಾರ್ಖಾನೆಗಳು ಯಾವುವು ? (ಕಾರ್ಖಾನೆವಾರು ಕಬ್ಬು ನುರಿಸುವ ಸಾಮರ್ಥ್ಯ ಮತ್ತು ಡಿಸ್ಟಿಲರಿ ಸಾಮರ್ಥ್ಯದ ವಿವರ ನೀಡುವುದು)

## ಯಶಸ್ವಿನಿ ಚಿಕಿತ್ಸಾ ದರಗಳ ಪರಿಷ್ಕರಣೆ ಕುರಿತು

**ಶ್ರೀ ಮಧು. ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೮ (೯೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಶಸ್ವಿನಿ ಯೋಜನೆಯಡಿ ಚಿಕಿತ್ಸೆಗಳ ದರ ಪರಿಷ್ಕರಣೆ ಸಂಬಂಧ ಯಾರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚಿಸಲ್ಪಟ್ಟಿದೆ ; ಸಮಿತಿಯಲ್ಲಿ ಯಾರು ಯಾರು ಇದ್ದಾರೆ, ವಿವರ (ಆದೇಶ ಪ್ರತಿ) ನೀಡುವುದು ; ಹಾಗೂ ಸದರಿ ವಿಷಯ ಕುರಿತು ಈ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಚಿಕಿತ್ಸೆಗಳಿಗೆ ಎಷ್ಟು ದರ ಪರಿಷ್ಕರಿಸಲು ಶಿಫಾರಸ್ಸು ಮಾಡಲಾಗಿದೆ ; ಚಿಕಿತ್ಸೆವಾರು ಹಿಂದಿನ ಮತ್ತು ಪರಿಷ್ಕೃತ ದರದ ಸಂಪೂರ್ಣ ವಿವರ ನೀಡುವುದು ;

(ಇ) ಯಶಸ್ವಿನಿ ಯೋಜನೆ ಜಾರಿ ಬಳಿಕ ಎಷ್ಟು ಚಿಕಿತ್ಸೆಗಳನ್ನು ಹೆಚ್ಚುವರಿಯಾಗಿ ಸೇರ್ಪಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಯಶಸ್ವಿನಿ ಚಿಕಿತ್ಸಾ ದರಗಳು ಕಡಿಮೆ ಇರುವುದೆಂದು ಭಾವಿಸಿ ರಾಜ್ಯದ ಪ್ರಮುಖ ಆಸ್ಪತ್ರೆಗಳು ಯೋಜನೆಯಡಿ ನೊಂದಾಯಿಸಿಕೊಳ್ಳದೇ ಇರುವುದು ನಿಜವೇ ; ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಭಾರತೀನಗರವನ್ನು ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಮಧು. ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-

೨೯ (೯೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿ; ಪಟ್ಟಣ ಪಂಚಾಯಿತಿಯಿಂದ ಪುರಸಭೆ ; ಪುರಸಭೆಯಿಂದ ನಗರಸಭೆ ಹಾಗೂ ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಿದೆಯೇ ; ಇದ್ದಲ್ಲಿ, ಈ ಕುರಿತು ಸ್ಥಳವಾರು, ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಜನಸಂಖ್ಯೆ, ಜನಸಾಂದ್ರತೆ ದೃಷ್ಟಿಯಿಂದ ಹಾಗೂ ವಾಣಿಜ್ಯ ಕೇಂದ್ರವಾಗಿ ವೇಗವಾಗಿ ಬೆಳವಣಿಗೆ ಕಾಣುತ್ತಿರುವ ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಭಾರತೀನಗರವನ್ನು ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು ; (ಈ ಬಗ್ಗೆ ವಿವರ ನೀಡುವುದು)

(ಇ) ಮಂಡ್ಯ ನಗರಕ್ಕೆ ಹೊಂದಿಕೊಂಡಂತೆ ಇರುವ ಸ್ಥಳಗಳನ್ನು ಒಟ್ಟುಗೂಡಿಸಿ ಮಂಡ್ಯ ನಗರಸಭೆಯನ್ನು ಮಂಡ್ಯ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಪ್ರಸ್ತಾವನೆ ಸ್ವೀಕೃತವಾಗಿದೆಯೇ ?

## ಕಬ್ಬು ಸಂಗ್ರಹಿಸಲಾದ ರಸ್ತೆ ಕರದಿಂದ ಅಭಿವೃದ್ಧಿಪಡಿಸುವ ರಸ್ತೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೦ (೯೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಸಕ್ಕರೆ ಕಾರ್ಖಾನೆಗಳು ಯಾವುವು ; ಈ ಸಕ್ಕರೆ ಕಾರ್ಖಾನೆಗಳು ಖರೀದಿಸಿದ ಪ್ರತಿ ಮೆ.ಟನ್ ಕಬ್ಬಿಗೆ ಸಂಗ್ರಹಿಸಿರುವ ರಸ್ತೆ ಕರ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಸಂಗ್ರಹಿಸಿರುವ ರಸ್ತೆ ಕರದ ಒಟ್ಟು ಮೊತ್ತ ಎಷ್ಟು; (ಕಾರ್ಖಾನೆವಾರು ವರ್ಷ, ನುರಿಸಿದ ಕಬ್ಬಿನ ಪ್ರಮಾಣದ ಮಾಹಿತಿ ನೀಡುವುದು)

(ಆ) ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ರಸ್ತೆ ಕರ ನಿಧಿಯಿಂದ ಹಂಚಿಕೆ ಮಾಡಿರುವ ಅನುದಾನ ಎಷ್ಟು; (ಜಿಲ್ಲಾವಾರು ಮತ್ತು ಕಾರ್ಖಾನೆವಾರು ಕಳೆದ ೩ ವರ್ಷಗಳ ಮಾಹಿತಿ ನೀಡುವುದು) ಹಾಗೂ ಈ ರೀತಿ ಸಂಗ್ರಹವಾದ ರಸ್ತೆ ಕರ ನಿಧಿಯಿಂದ ಆಯಾ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕೈಗೊಂಡ ರಸ್ತೆ ದುರಸ್ತಿ, ಅಭಿವೃದ್ಧಿ ಮತ್ತು ಉನ್ನತೀಕರಣದ ಕಾಮಗಾರಿಗಳು ಯಾವುವು ಹಾಗೂ ಆ ಕಾಮಗಾರಿಗಳಿಗೆ ಭರಿಸಲಾಗಿರುವ ವೆಚ್ಚ ಎಷ್ಟು ;

(ಇ) ರಸ್ತೆ ಕರ ನಿಧಿಯಿಂದ ಜಿಲ್ಲಾವಾರು ಅನುದಾನ ಹಂಚಿಕೆ ಮಾಡದಿದ್ದರೆ ಕಾರಣಗಳೇನು ; ವಿವರ ನೀಡುವುದು ; ರಸ್ತೆ ಕರ ನಿಧಿಯಿಂದ ಕೈಗೆತ್ತಿಕೊಳ್ಳಲಾಗುವ ರಸ್ತೆ ಕಾಮಗಾರಿಗಳ ಪರಿಣಾಮಕಾರಿ ಮೇಲ್ವಿಚಾರಣೆ ಮತ್ತು ನಿರ್ವಹಣೆಗೆ

ಅನುಕೂಲವಾಗುವಂತೆ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆಯೇ ; ಕಳೆದ ಮೂರು ವರ್ಷಗಳಲ್ಲಿ ಈ ಸಮಿತಿ ಎಷ್ಟು ಬಾರಿ ಸಭೆಗಳನ್ನು ನಡೆಸಿದೆ ? (ಸಭೆ ನಡೆದ ದಿನಾಂಕಗಳ ಮಾಹಿತಿಯನ್ನು ವರ್ಷವಾರು ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಹೊಸ ವಿಮಾನ ನಿಲ್ದಾಣಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧ (೧೦೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ವಿಮಾನ ನಿಲ್ದಾಣಗಳಲ್ಲಿ ದೇಶಿಯ ಮತ್ತು ಅಂತರಾಷ್ಟ್ರೀಯ ನಾಗರಿಕ ಮತ್ತು ಸರಕು ವಿಮಾನಗಳ ಸಂಚಾರ ಮಾಡಲು ಬೇಕಾಗುವ ಮೂಲ ಸೌಕರ್ಯಗಳು ಇವೆಯೇ ; ಇದ್ದಲ್ಲಿ, ಯಾವ ಯಾವ ವಿಮಾನ ನಿಲ್ದಾಣಗಳಲ್ಲಿ ಈ ಸೌಲಭ್ಯಗಳಿವೆ ;

(ಆ) ಈಗಾಗಲೇ ಇರುವ ವಿಮಾನ ನಿಲ್ದಾಣಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದ ಕರಾವಳಿ ಜಿಲ್ಲೆಗಳಿಂದ ಅತೀ ಹೆಚ್ಚು ನಾಗರಿಕರು ವಿದೇಶಗಳಿಗೆ ಉದ್ಯೋಗ, ವ್ಯವಹಾರಗಳಿಗೆ ವಿಮಾನ ಮೂಲಕ ಪ್ರಯಾಣಿಸುತ್ತಿದ್ದು ಅನೇಕ ಸಂದರ್ಭಗಳಲ್ಲಿ ರಾಜ್ಯದ ಬೆರಳೆಣಿಕೆಯ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣಗಳಲ್ಲಿ ಇಳಿದು

ಇನ್ನೊಂದು ವಿಮಾನದ ಮೂಲಕ ಕರಾವಳಿ ಜಿಲ್ಲೆಗಳಿಗೆ ಪ್ರಯಾಣಿಸಬೇಕಾದ ಅನಿವಾರ್ಯತೆ ಸೃಷ್ಟಿಯಾಗಿರುವ ಸಮಸ್ಯೆಯನ್ನು ಪರಿಹರಿಸಲು ಇಲಾಖೆ ಯಾವ ಕ್ರಮ ವಹಿಸುತ್ತಿದೆ ;

(ಈ) ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ವಿಮಾನ ನಿಲ್ದಾಣ (**Tabletop runway**) ಟೇಬಲ್ ಟಾಪ್ ಮಾದರಿಯ ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣವಾಗಿದ್ದು ಹಲವು ವಿದೇಶಿ ವಿಮಾನಗಳು ಸಂಚರಿಸುತ್ತಿಲ್ಲವಾದ್ದರಿಂದ ಕರಾವಳಿಯ ಮಂಗಳೂರು ಮತ್ತು ಉಡುಪಿ ನಡುವೆ ಹೊಸ ವಿಮಾನ ನಿಲ್ದಾಣ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಏಕ ಹಾಗೂ ಬಹು ನಿವೇಶನ ಬಡಾವಣೆ ನಕ್ಷೆ ಅನುಮೋದನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨ (೧೦೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಒಳಪಡದೇ ಇರುವ ಪ್ರದೇಶದಲ್ಲಿ ಮಹಾಯೋಜನೆ ನಿಯಮಗಳ ಕರಡನ್ನು ೩೦.೦೧.೨೦೨೫ರಂದು ಪ್ರಕಟಿಸಿ ಸಾರ್ವಜನಿಕ ಆಕ್ಷೇಪಣೆಗಳನ್ನು ಆಹ್ವಾನಿಸಿದ್ದು ಅದರ ಮೊದಲೇ ಯಾವ ನಿಯಮಾವಳಿಗಳ ಪ್ರಕಾರ ಏಕ ಹಾಗೂ ಬಹು ನಿವೇಶನ ಬಡಾವಣೆ ನಕ್ಷೆ ಅನುಮೋದನೆ ನೀಡಲಾಗುತ್ತಿದೆ ;

(ಆ) ಬಡಾವಣೆ ನಕ್ಷೆ ಅನುಮೋದನೆ ಕುರಿತು ಇಲಾಖೆ ಪ್ರಕಟಿಸಿದ

ಕರಡು ನಿಯುಮಗಳು ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿರುವ ತುಂಡು ಭೂಮಿ ಮತ್ತು ಹರಡಿಕೊಂಡಿರುವ ಜನವಸತಿ ಪ್ರದೇಶಗಳಿಗೆ ಆಗುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಸಂಬಂಧಪಟ್ಟ ಇಲಾಖೆಗಳಾದ ಕಂದಾಯ, ಲೋಕೋಪಯೋಗಿ, ರಾಷ್ಟ್ರಿಯ ಹೆದ್ದಾರಿ ಪ್ರಾಧಿಕಾರ, ಗ್ರಾಮ ಪಂಚಾಯತಿ ಇತ್ಯಾದಿಗಳ ನಡುವೆ ಸಮನ್ವಯ ಸಾಧಿಸಲು ಜಂಟಿ ಸಮಾಲೋಚನೆ ಸಭೆ ನಡೆಸಲು ಯಾವಾಗ ಕ್ರಮ ವಹಿಸಲಾಗುವುದು ;

(ಇ) ಉಭಯ ಜಿಲ್ಲೆಗಳಲ್ಲಿ ಇಲ್ಲಿಯವರೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಷ್ಟು ಏಕ ಹಾಗೂ ಬಹು ನಿವೇಶನ ಬಡಾವಣೆ ನಕ್ಷೆ ಅನುಮೋದನೆ ನೀಡಿದೆ ; ಎಷ್ಟು ಕಡತಗಳನ್ನು ಯಾವ್ಯಾವ ಕಾರಣಗಳಿಗಾಗಿ ತಿರಸ್ಕರಿಸಿದೆ ಮತ್ತು ಹಿಂತಿರುಗಿಸಿದೆ ; ರಸ್ತೆ ಅಗಲೀಕರಣ, ಸಾರ್ವಜನಿಕ ರಸ್ತೆ ಮತ್ತು ರಸ್ತೆ ಜಾಗಗಳ ಸಮಸ್ಯೆಗಳ ಕಾರಣ ಹೆಚ್ಚಿನ ನಿವೇಶನ ಬಡಾವಣೆ ನಕ್ಷೆ ತಿರಸ್ಕಾರವಾಗುತ್ತಿರುವ ಬಗ್ಗೆ ಸಮಸ್ಯೆ ಸರಿಪಡಿಸಲು ಸರ್ಕಾರ ಏನು ಕ್ರಮವಹಿಸಿದೆ ;

(ಈ) ನಿವೇಶನ ಬಡಾವಣೆ ನಕ್ಷೆ ಅನುಮೋದಿಸುವ ನಗರ ಮತ್ತು ಯೋಜನಾ ಇಲಾಖೆಗೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಟ್ಟಡ ಪ್ರಾರಂಭಿಕ ಪ್ರಮಾಣ ಪತ್ರ ನೀಡದೇ ಇರಲು ಕಾರಣವೇನು ; ಈ ಕುರಿತ ನಿಯಮಗಳು ಯಾವುವು ; ಕಟ್ಟಡ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಇಲಾಖೆ ಯಾವುದು ಮತ್ತು ಪ್ರಕ್ರಿಯೆಯ (**Procedure**) ವಿವರಗಳೇನು ?

## ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಗಣಿಗಾರಿಕೆ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩ (೧೦೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಣ್ಣು ಮತ್ತು ಕಲ್ಲುಗಣಿಗಾರಿಕೆ ನಡೆಸಲು ಎಷ್ಟು ಅನುಮತಿ ನೀಡಲಾಗಿದೆ ; ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಗೆ ಈ ಕುರಿತ ಮಾಹಿತಿ ನೀಡಲಾಗಿದೆಯೇ ;

(ಆ) ಪ್ರತಿ ವರ್ಷ ಗಣಿಗಾರಿಕೆಯಿಂದ ಸಂಗ್ರಹವಾಗುವ ರಾಜಧನದ ವಿವರವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಗೆ ವಾರ್ಷಿಕವಾಗಿ ಕಳುಹಿಸಿಕೊಡಲಾಗುತ್ತಿದೆಯೇ ;

(ಇ) ಪ್ರತಿ ವರ್ಷ ಗಣಿಗಾರಿಕೆಯಿಂದ ಸಂಗ್ರಹವಾದ ರಾಜಧನದಲ್ಲಿ ಸ್ಥಳೀಯ ಸಂಸ್ಥೆಗಳಿಗೆ ನಿಯಮಾನುಸಾರ ನೀಡಬೇಕಾದ ಪಾಲು ಎಷ್ಟು ; ಎಷ್ಟು ಸ್ಥಳೀಯ ಸಂಸ್ಥೆಗಳಿಗೆ ನೀಡಿದೆ ; ಇನ್ನು ನೀಡಬೇಕಾದ ಪಾಲು ಎಷ್ಟು ; ಇದನ್ನು ಯಾವಾಗ ನೀಡಲಾಗುವುದು ;

(ಈ) ಒಂದು ಗ್ರಾಮ ಪಂಚಾಯತಿಯಲ್ಲಿ ಅಥವಾ ಪಕ್ಕದ ರಾಜ್ಯದಲ್ಲಿ ಗಣಿಗಾರಿಕೆ ಮಾಡಿ ಅದನ್ನು ಇತರ ಭಾಗದ ರಸ್ತೆಗಳಲ್ಲಿ ಸಾಗಿಸುವಾಗ ಹಾನಿಗೊಳಗಾದ ರಸ್ತೆಗಳ ದರುಸ್ತಿ ಹಾಗೂ ನಿರ್ವಹಣೆ ಹೊಣೆಗಾರಿಕೆ ಯಾರದ್ದು ; ಸದರಿ ರಸ್ತೆಗಳನ್ನು ದುರಸ್ತಿ ಮಾಡಲಾಗುತ್ತಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಈಗಾಗಲೇ ಸರ್ಕಾರಿ, ಖಾಸಗಿ ಜಾಗಗಳಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಪರವಾನಿಗೆಯೊಂದಿಗೆ ಮತ್ತು ಅನಧಿಕೃತವಾಗಿ ಗಣಿಗಾರಿಕೆ ಮಾಡಿ ಬೃಹತ್ ಗಾತ್ರದ ಪ್ರಪಾತಗಳು ನಿರ್ಮಾಣವಾಗಿದ್ದು ಅದನ್ನು ಸಮತಟ್ಟು ಮಾಡುವ ಜವಾಬ್ದಾರಿ ಯಾರಿಗೆ ಸಂಬಂಧಿಸಿದೆ ಮತ್ತು ಅದನ್ನು ಪ್ರಸ್ತುತ ಮೇಲ್ವಿಚಾರಣೆ ಯಾರು ಮಾಡುತ್ತಿದ್ದಾರೆ ; ಇನ್ನೂ ಇರುವ ಪ್ರಪಾತಗಳನ್ನು ಸಮತಟ್ಟು ಮಾಡಲು ಯಾವ ಕ್ರಮವಹಿಸಿದೆ ? (ವಿವರ ನೀಡುವುದು)

## ಸಹಕಾರಿ ಸಂಘಗಳ ಮೂಲಕ ಸಾಲ ವಿತರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪ (೧೦೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಕೃಷಿಕರಿಗೆ ನೆರವಾಗುವ ನಿಟ್ಟಿನಲ್ಲಿ ಕೃಷಿ ಪತ್ತಿನ ಸಹಕಾರಿ ಸಂಘಗಳ ಮೂಲಕ ಶೂನ್ಯ ಬಡ್ಡಿದರದಲ್ಲಿ ಮತ್ತು ಕನಿಷ್ಠ ಬಡ್ಡಿದರದಲ್ಲಿ ಬೆಲೆ ಸಾಲ ನೀಡುವ ಕುರಿತು ಇಲಾಖೆ ಈಗಾಗಲೇ ರಚಿಸಿರುವ ನಿಯಮಗಳನ್ನು ಪರಿಷ್ಕರಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯದ ಕೃಷಿಕರ ಕೃಷಿ ಭೂಮಿಯ ದಾಖಲೆಗಳು ಕ್ಲಿಪ್ತ ಸಮಯದಲ್ಲಿ ಇಂದೀಕರಣವಾಗದ ಕಾರಣ ಹಾಗೂ ಕೃಷಿ ಪತ್ತಿನ ಸಹಕಾರಿ ಸಂಘಗಳ ಸಾಲ ನಿಯಮಗಳು ಕ್ಲಿಷ್ಟಕರವಾಗಿರುವ ಕಾರಣ ಜನರು ಮೈಕ್ರೋ ಫೈನಾನ್ಸ್ ಸಂಸ್ಥೆಗಳನ್ನು ಕಿರುಸಾಲಕ್ಕಾಗಿ ಅವಲಂಬಿಸಿರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮೈಕ್ರೋ ಫೈನಾನ್ಸ್ ಭಾಧಿತರು ಸ್ಥಳೀಯ ಸಹಕಾರಿ ಸಂಘಗಳನ್ನು ಸಾಲಕ್ಕಾಗಿ ಸಂಪರ್ಕಿಸಿದ ಕುರಿತು ಮಾಹಿತಿ ನೀಡುವುದು ;

(ಇ) ಮೈಕ್ರೋ ಫೈನಾನ್ಸ್ ಹಾವಳಿಯಿರುವ ಜಿಲ್ಲೆಗಳಲ್ಲಿ ಕೃಷಿ ಪತ್ತಿನ ಸಹಕಾರಿ ಸಂಘಗಳಿಗೆ ಸಲ್ಲಿಸಿರುವ ಸಾಲದ ಅರ್ಜಿಗಳಲ್ಲಿ ಎಷ್ಟು ಕೃಷಿಕರಿಗೆ ಸಾಲ ನೀಡಿದೆ ಮತ್ತು ಸಾಲ ನೀಡಲು ತಿರಸ್ಕರಿಸಿದೆ ; (ಶೇಕಡಾವಾರು ಸಹಿತ ವಿವರ ನೀಡುವುದು)

(ಈ) ವರ್ಷ ೨೦೨೪-೨೫ರಲ್ಲಿ ರೂ ೫ ಲಕ್ಷಗಳವರೆಗೆ ಶೂನ್ಯ ಬಡ್ಡಿದರಕ್ಕೆ ಸಂಬಂಧಿಸಿದಂತೆ ೧೧೫೬೬೪ ಅರ್ಜಿಗಳು ಮತ್ತು ಶೇ ೩.೦೦ರ ಬಡ್ಡಿದರದಲ್ಲಿ ರೂ ೧೫.೦೦ ಲಕ್ಷಗಳವರೆಗೆ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಕ್ಕೆ ೭೦೫೧ ಅರ್ಜಿಗಳು ಪರಿಶೀಲನೆಯಲ್ಲಿದ್ದು ಡಿಸಿಸಿ ಹಂತದಲ್ಲಿ ಪ್ರಸ್ತುತ ಎಷ್ಟು ಅರ್ಜಿಗಳಿಗೆ ಸಾಲ ವಿತರಿಸಿದೆ ; ಎಷ್ಟು ಅರ್ಜಿಗಳನ್ನು ತಿರಸ್ಕರಿಸಿದೆ ; ಅದಕ್ಕೆ ಕಾರಣಗಳೇನು ?

## ಪೌರಾಡಳಿತ ಸಂಸ್ಥೆಗಳ ಮೂಲ ಸೌಕರ್ಯಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫ (೧೦೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಪೌರಾಡಳಿತಗಳ ಅಧೀನದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತರಕಾರಿ, ಹೂ ಹಾಗೂ ಮೀನು ಮಾರುಕಟ್ಟೆಗಳು, ವಾಣಿಜ್ಯ ಸಂಕೀರ್ಣಗಳು, ಬಸ್ಸು ನಿಲ್ದಾಣಗಳು, ಸಾರ್ವಜನಿಕ ಶೌಚಾಲಯಗಳು, ಆಟೋ ಹಾಗೂ ಇತರ ವಾಹನ ನಿಲ್ದಾಣಗಳು, ಸಾರ್ವಜನಿಕ ಪಾರ್ಕಿಂಗ್ ಸ್ಥಳಗಳು, ಇತ್ಯಾದಿಗಳ ಸ್ಥಳ ನಿಗದಿಪಡಿಸುವಾಗ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಲು ಏನು ಕ್ರಮವಹಿಸಲಾಗುತ್ತಿದೆ ;

(ಆ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಂಪರ್ಕ ವಿರುವ ಸರ್ಕಾರಿ ಕಛೇರಿ ಪ್ರಾರಂಭಿಸುವಾಗ ಹಾಗೂ ವಾಣಿಜ್ಯ ಸಂಕೀರ್ಣಗಳಿಗೆ ಪರವಾನಿಗೆ ನೀಡುವಾಗ ಆಯಾಯ ಪ್ರದೇಶದಲ್ಲಿ ಇರಬಹುದಾದ ಸಾರ್ವಜನಿಕ ಸಂಚಾರ ವ್ಯಾಪಾರ ವಹಿವಾಟು

ಇತ್ಯಾದಿಗಳ ಪ್ರಮಾಣಕ್ಕನುಗುಣವಾಗಿ ಪಾರ್ಕಿಂಗ್ ಸ್ಥಳಗಳು ಮತ್ತು ಮುಕ್ತ ಪ್ರದೇಶವನ್ನು (ಓಪನ್ ಸ್ಪೇಸ್) ನಿಗದಿಪಡಿಸುವ ಬಗ್ಗೆ ಇಲಾಖೆ ಯೋಚಿಸಿದೆಯೇ ; ಇಂತಹ ನಿಯಮಗಳು ಇಲ್ಲದೆ ಪಾರ್ಕಿಂಗ್ ಸಮಸ್ಯೆ ಉದ್ಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು ಈ ಕುರಿತು ಏನು ಕ್ರಮವಹಿಸುತ್ತಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚು ಮಳೆ ಬರುವ ಮತ್ತು ಪೂರ್ಣ ಪ್ರಮಾಣದ ಒಳಚರಂಡಿ ವ್ಯವಸ್ಥೆಯಿರದ ಕಾರಣ ಮಳೆಗಾಲದಲ್ಲಿ ಕೊಳಚೆ ನೀರು ಮನೆಗಳಿಗೆ ನುಗ್ಗುತ್ತಿದ್ದು ಈ ಬಗ್ಗೆ ಇಲಾಖೆ ಯಾವ ರೀತಿಯ ಕ್ರಮವಹಿಸುತ್ತಿದೆ ;

(ಈ) ಮೂಡಬಿದ್ರೆ ಪುರಸಭಾ ವ್ಯಾಪ್ತಿಯಲ್ಲಿ ಒಳಚರಂಡಿ ಮತ್ತು ವ್ಯಾಜ್ಯದಕಾರಣಕ್ಕಾಗಿ ಸ್ಥಗಿತಗೊಂಡ ವಾಣಿಜ್ಯ ಸಂಕೀರ್ಣ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಈ ಎಲ್ಲಾ ಮೂಲ ಸೌಲಭ್ಯಗಳ ಅಭಿವೃದ್ಧಿಗೆ ಪೌರಾಡಳಿತ ಇಲಾಖೆ ಸಮಗ್ರ ಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

## ರಾಜ್ಯದ ಪ್ರಮುಖ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬ (೧೦೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕೃಷಿ ಬೆಲೆ ಆಯೋಗ ತನ್ನ ವರದಿಯಲ್ಲಿ ೨೬ ಬೆಳೆಗಳನ್ನು ರಾಜ್ಯದ ಪ್ರಮುಖ ಬೆಳೆಗಳೆಂದು ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಸರ್ಕಾರ ಕನಿಷ್ಠ ಬೆಂಬಲ ಬೆಲೆ ಘೋಷಿಸಿದ ಬೆಳೆಗಳನ್ನು ಹೊರತುಪಡಿಸಿ ಎಷ್ಟು ಬೆಳೆಗಳಿಗೆ ರಾಜ್ಯ ಸರ್ಕಾರ ಬೆಂಬಲ ಬೆಲೆ ಘೋಷಿಸಲು ಕ್ರಮ ಕೈಗೊಂಡಿದೆ ;

(ಇ) ರಾಜ್ಯದ ಪ್ರಮುಖ ಬೆಳೆಗಳಲ್ಲಿ ಒಂದಾದ ದ್ರಾಕ್ಷಿ, ಮಾವು, ಬಾಳೆ, ಈರುಳ್ಳಿ ಸೇರಿದಂತೆ ತೋಟಗಾರಿಕಾ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ರಾಜ್ಯದಲ್ಲಿ ವಿವಿಧ ಕಂಪನಿಗಳ ಬಂಡವಾಳ ಹೂಡಿಕೆ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭ (೧೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಹೊಸದಾಗಿ ಅಥವಾ ವಿಸ್ತರಿಸಲಾದ ಬಂಡವಾಳ ಮೊತ್ತವೆಷ್ಟು;

(ಆ) ಯಾವ ಯಾವ ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಿವೆ ;

(ಇ) ಈ ಕಂಪನಿಗಳು ಪ್ರಾರಂಭವಾದ ವರ್ಷದಿಂದ ಇಲ್ಲಿಯವರೆಗೆ ಎಷ್ಟು ಉದ್ಯೋಗಾವಕಾಶಗಳನ್ನು ಒದಗಿಸಿದೆ ; (ವರ್ಷವಾರು ಮಾಹಿತಿ ಒದಗಿಸುವುದು)

(ಈ) ಹೂಡಿಕೆ ಮಾಡಿದ ಕಂಪನಿಗಳು ವಿವಿಧ ಕಾರಣಗಳಿಗಾಗಿ ಸ್ಥಗಿತಗೊಂಡಿದೆಯೇ ; ಸ್ಥಗಿತಗೊಂಡಿದ್ದಲ್ಲಿ, ಅದಕ್ಕೆ ಕಾರಣಗಳೇನು ?

## ರಾಜ್ಯ ಹಾಪ್‌ಕಾಮ್ಸ್ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೮ (೧೦೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಹಾಪ್‌ಕಾಮ್ಸ್ ಸಂಸ್ಥೆಯು ಸಿಬ್ಬಂದಿ ಕೊರತೆ ಹಾಗೂ ಇತರೆ ಸಮಸ್ಯೆಗಳಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ತೋಟಗಾರಿಕಾ ರೈತ ಬೆಳೆಗಾರರ ಅನುಕೂಲಕ್ಕಾಗಿ ಸ್ಥಾಪಿತವಾದ ಈ ಸಂಸ್ಥೆ ನಷ್ಟದಲ್ಲಿದ್ದು, ನಷ್ಟ ಸರಿದೂಗಿಸಲು ಕೈಗೊಂಡ ಕ್ರಮಗಳೇನು ;

(ಇ) ಹಾಪ್‌ಕಾಮ್ಸ್‌ನ ಪುನಃಶ್ಚೇತನಕ್ಕೆ ಸರ್ಕಾರ ಹೊಸ ಮಾದರಿ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲು ಮುಂದಾಗುವುದೇ ?

## ವಿದೇಶಿ ನೇರ ಹೂಡಿಕೆ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೯ (೧೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ರಾಜ್ಯಕ್ಕೆ ಹರಿದುಬಂದ ವಿದೇಶಿ ನೇರ ಹೂಡಿಕೆ ಪ್ರಮಾಣವೆಷ್ಟು ; (ಕಳೆದ ಎರಡು ವರ್ಷಗಳ ಮಾಹಿತಿ ಒದಗಿಸುವುದು)

(ಆ) ಜಾಗತಿಕ ಆರ್ಥಿಕ ಬೆಳವಣಿಗೆಗಳ ಕಾರಣದಿಂದ ಈ ಹೂಡಿಕೆ ಪ್ರಮಾಣದಲ್ಲಿ ಕೊರತೆ ಆಗಿದೆಯೇ ;

(ಇ) ಕಳೆದ ಎರಡು ವರ್ಷಗಳಲ್ಲಿ ನೇರ ಹೂಡಿಕೆ ಪ್ರಮಾಣ ಹಾಗೂ ಹಿಂದಿನ ೫ ವರ್ಷಗಳ ಹೂಡಿಕೆಗೆ ಹೋಲಿಸಿದರೆ ರಾಜ್ಯಕ್ಕೆ ಕೊರತೆ ಆಗಿದೆಯೇ ; ಹಾಗಿದ್ದಲ್ಲಿ, ಈ ನಷ್ಟ ಭರಿಸಲು ಕೈಗೊಂಡ ಕ್ರಮಗಳೇನು ?

## ಕಬ್ಬು ಬೆಳೆಗಾರರ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦ (೧೦೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತಕಾಯಲು ಕೈಗೊಂಡ ಕ್ರಮಗಳೇನು ;

(ಆ) ಸಕ್ಕರೆ ಕಾರ್ಖಾನೆಗಳಲ್ಲಿ ತೂಕದಲ್ಲಿ ಆಗುವ ಮೋಸ ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆಯೇ ?

## ಕೆ.ಐ.ಎ.ಡಿ.ಬಿ ಯಲ್ಲಿನ ಭ್ರಷ್ಟಾಚಾರದ ಬಗ್ಗೆ

**ಡಾ॥ ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧ (೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಯಿಂದ ವಶಪಡಿಸಿಕೊಂಡಿರುವ ರೈತರ ಜಮೀನು ಎಷ್ಟು ಮತ್ತು ಎಲ್ಲೆಲ್ಲಿ ; (ಜಿಲ್ಲಾವಾರು, ವಿಸ್ತೀರ್ಣವಾರು ವಿವರ ನೀಡುವುದು)

(ಆ) ರೈತರಿಂದ ಭೂ ಸ್ವಾಧೀನಪಡಿಸಿಕೊಂಡಿರುವ ಜಮೀನುಗಳಿಗೆ ಪರಿಹಾರ ಧನವನ್ನು ನೀಡಲಾಗಿದೆಯೇ ; ಎಷ್ಟು ಜನರಿಗೆ ನೀಡಲಾಗಿದೆ ಹಾಗೂ ಇನ್ನೂ ಎಷ್ಟು ರೈತರಿಗೆ ನೀಡಬೇಕಾಗಿದೆ ; (ಪರಿಹಾರ ಮೊತ್ತದ ವಿವರ ನೀಡುವುದು)

(ಇ) ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರುವುದರ ಜೊತೆಗೆ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅಂತಹ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸಕ್ಕರೆ ನಿರ್ದೇಶನಾಲಯವನ್ನು ಬೆಂಗಳೂರಿನಿಂದ ಬೆಳಗಾವಿಗೆ ಸ್ಥಳಾಂತರ ಮಾಡುವ ಬಗ್ಗೆ

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨ (೬೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚು ಸಕ್ಕರೆ ಕಾರ್ಖಾನೆಗಳು ಉತ್ತರ ಕರ್ನಾಟಕ ಭಾಗದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಉತ್ತರ ಕರ್ನಾಟಕ ಭಾಗದಲ್ಲಿರುವ ಸಕ್ಕರೆ ಕಾರ್ಖಾನೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಬೆಳಗಾವಿ ಭಾಗದಲ್ಲಿ ಹೆಚ್ಚು ಕಬ್ಬು ಬೆಳೆಯುತ್ತಿರುವುದರಿಂದ ಹಾಗೂ ಹೆಚ್ಚು ಸಕ್ಕರೆ ಕಾರ್ಖಾನೆಗಳಿರುವುದರಿಂದ ಸಕ್ಕರೆ

ನಿರ್ದೇಶನಾಲಯವನ್ನು ಬೆಳಗಾವಿಗೆ ಸ್ಥಳಾಂತರ ಮಾಡಬೇಕೆಂದು ಈ ಹಿಂದೆಯೇ ಸರ್ಕಾರ ತೀರ್ಮಾನ ಮಾಡಿದ್ದರೂ ಸ್ಥಳಾಂತರ ಮಾಡದಿರಲು ಕಾರಣವೇನು ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನಿರ್ದೇಶನಾಲಯವನ್ನು ಸ್ಥಳಾಂತರ ಮಾಡಲಾಗುವುದು ?

## ಖಾಸಗಿ ಹಣಕಾಸು ಸಂಸ್ಥೆಗಳು ಪಡೆದ ಸಾಲಕ್ಕೆ ಚಕ್ರಬಡ್ಡಿ ವಿಧಿಸಿ ವಸೂಲಾತಿಗೆ ಜನರಿಗೆ ಕಿರುಕುಳ ನೀಡುತ್ತಿರುವ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩ (೭೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದ ಜನರಿಗೆ ಹಣಕಾಸಿನ ಸಂಸ್ಥೆಯವರು ವಸೂಲಾತಿಗಾಗಿ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಸಾಲ ಪಡೆದ ಗ್ರಾಹಕರಿಗೆ ಬಡ್ಡಿ, ಚಕ್ರಬಡ್ಡಿಯನ್ನು ಕಾನೂನು ಬಾಹಿರವಾಗಿ ವಿಧಿಸಿ ಹಣ ವಸೂಲಿ ಮಾಡುತ್ತಿರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಇಂತಹ ಹಣಕಾಸು ಸಂಸ್ಥೆಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## ಸಹಕಾರಿ ಬ್ಯಾಂಕ್‌ಗಳಿಂದ ಹಣ ದುರುಪಯೋಗ ನಡೆದು ಗ್ರಾಹಕರಿಗೆ ತೊಂದರೆ ಉಂಟಾಗಿರುವ ಬಗ್ಗೆ

**ಡಾ॥ ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪ (೭೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸಹಕಾರಿ ಬ್ಯಾಂಕುಗಳಲ್ಲಿ ಹಣ ದುರುಪಯೋಗ ನಡೆದು ಗ್ರಾಹಕರಿಗೆ ತೊಂದರೆಯಾಗಿದೆ ; (ವಿವರಗಳನ್ನು ನೀಡುವುದು)

(ಆ) ಗ್ರಾಹಕರು ಲಕ್ಷಾಂತರ ರೂಪಾಯಿ ಠೇವಣಿ ಇಟ್ಟಿದ್ದು ಹಣ ದುರುಪಯೋಗವಾದಾಗ ಇವರ ಹಿತ ಕಾಪಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;

(ಇ) ಹಣ ದುರುಪಯೋಗ ಮಾಡಿರುವ ಸಹಕಾರಿ ಬ್ಯಾಂಕಿನ ಆಡಳಿತ ವರ್ಗದವರ ಮೇಲೆ ಯಾವ ರೀತಿಯ ತನಿಖೆ ಮಾಡುತ್ತೀರಿ ; ತನಿಖೆ ಯಾವ ಹಂತದಲ್ಲಿದೆ ; ಹಣ ದುರುಪಯೋಗ ಮಾಡಿರುವ ಸಹಕಾರಿ ಬ್ಯಾಂಕುಗಳಾವುವು ? (ವಿವರ ನೀಡುವುದು)

## ರಾಜ್ಯದ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫ (೫೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರ ಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ? (ಜಿಲ್ಲಾವಾರು ವಿವರ ಒದಗಿಸುವುದು)

## ರಾಜ್ಯದಲ್ಲಿ ಒಳಚರಂಡಿ ಹಾಗೂ ನೀರು ಸರಬರಾಜು ಪೂರೈಕೆಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೫೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಒಳಚರಂಡಿ ಹಾಗೂ ನೀರು ಸರಬರಾಜು ಪೂರೈಕೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ೨ ವರ್ಷದಿಂದ ಒಳಚರಂಡಿ ಹಾಗೂ ನೀರು ಸರಬರಾಜು ಪೂರೈಕೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿ ಯಾವುವು ? (ಪ್ರತಿ ಕಾಮಗಾರಿಯ ಅನುದಾನದ ವಿವರ ಒದಗಿಸುವುದು)

## KHIR City ಯೋಜನೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭ (೭೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಸಮೀಪ ಸುಮಾರು ೨೦೦೦ ಎಕರೆ ಪ್ರದೇಶದಲ್ಲಿ **Knowledge Health Care, Innovation and Research City (KHIR)** ಅಭಿವೃದ್ಧಿ ಪಡಿಸಲು ಸರ್ಕಾರ ಯೋಜಿಸಿದ್ದು ನಿಜವೇ ;

(ಆ) ಇದ್ದಲ್ಲಿ, ಈ ಯೋಜನೆಗೆ ತಗಲುವ ಅಂದಾಜು ಬಂಡವಾಳ ಹೂಡಿಕೆ ಎಷ್ಟು ; ಈ ಯೋಜನೆಯಿಂದ ಎಷ್ಟು ಜನರಿಗೆ ಉದ್ಯೋಗ ದೊರೆಯುವ ನಿರೀಕ್ಷೆಯಿದೆ ;

(ಇ) ಈ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಯೋಜನೆಯಲ್ಲಿ ತೊಡಗಿಕೊಳ್ಳಲು ಎಷ್ಟು ಹೂಡಿಕೆದಾರರು ಆಸಕ್ತಿ ತೋರಿರುತ್ತಾರೆ ? ( ವಿವರವನ್ನು ನೀಡುವುದು)

## ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮ (೭೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ಜಿಲ್ಲೆಯ ೧೦೦೦ ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ ಮಾದರಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದ್ದು ನಿಜವೇ ;

(ಆ) ಹಾಗಿದಲ್ಲಿ, ಸದರಿ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ ಸರ್ಕಾರದ ವತಿಯಿಂದ ಎಷ್ಟು ಅನುದಾನವನ್ನು ಒದಗಿಸಲಾಗಿದೆ ;

(ಇ) ಈ ಯೋಜನೆಯ ಅನುಷ್ಠಾನದಿಂದ ರಾಜ್ಯದ ಜಿಲ್ಲೆಯಲ್ಲಿ ಎಷ್ಟು ಉದ್ಯೋಗಗಳು ಸೃಜನೆಯಾಗುವ ನಿರೀಕ್ಷೆಯಿದೆ ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ಭಾರತೀಯ ತೋಟಗಾರಿಕಾ ಸಂಶೋಧನೆ ಸಂಸ್ಥೆ ಬೆಂಗಳೂರು ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯ (೭೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನಲ್ಲಿರುವ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯು **(IIHR)** ಭಾರತದ ಮೊದಲ ತೋಟಗಾರಿಕಾ ಸಂಶೋಧನಾ ಸಂಸ್ಥೆಯಾಗಿದ್ದು. **ICAR**ನ ಈ ಅಂಗಸಂಸ್ಥೆಯು ವಿವಿಧ ತೋಟಗಾರಿಕಾ ಪ್ರಕಾರಗಳ ಕುರಿತು ಸಂಶೋಧನೆ ನಡೆಸುತ್ತಿದ್ದು, ಈ ಸಂಸ್ಥೆಯು ಸ್ಥಾಪಿಸಿದ ಉದ್ದೇಶವನ್ನು ಸಾಧಿಸಿದೆಯೇ ; ಸಾಧಿಸಿದ್ದಲ್ಲಿ, ಅದರ ವಿವರಗಳು ಮತ್ತು ಇಲ್ಲವಾದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಸದರಿ ಸಂಸ್ಥೆಯು ತೋಟಗಾರಿಕಾ ತಂತ್ರಜ್ಞಾನದಲ್ಲಿ ಯಾವುದಾದರೂ ಪ್ರಗತಿ/ಸಾಧನೆಗಳನ್ನು ಸಾಧಿಸಿದೆಯೇ ಹಾಗೂ ಈ ಪ್ರಗತಿಗಳು/ ಸಾಧನೆಗಳನ್ನು ರಾಜ್ಯದ ರೈತರು ಅಳವಡಿಸಿಕೊಂಡಿದ್ದರೆಯೇ ; ಇದ್ದಲ್ಲಿ, ಅದರ ವಿವರಗಳು ಮತ್ತು ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಇ) ರಾಜ್ಯದಲ್ಲಿ ತೋಟಗಾರಿಕೆ ಕೃಷಿಯನ್ನು ಉತ್ತೇಜಿಸಲು ಸರ್ಕಾರ ತೆಗೆದುಕೊಂಡಿರುವ ಇತರೆ ಕ್ರಮಗಳು ಯಾವುವು ?

## Integrated Township ಅಭಿವೃದ್ಧಿಪಡಿಸುವ ಬಗ್ಗೆ

ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-

೫೦ (೮೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಕಲಬುರಗಿ, ಕೆ.ಜಿ.ಎಫ್, ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಅಭಿವೃದ್ಧಿಪಡಿಸಲು ಈ ಹಿಂದೆ ಆಯ-ವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಯ ಪ್ರಸ್ತುತ ಹಂತವೇನು ;

(ಆ) ಈ ಇಂಟಿಗ್ರೇಟೆಡ್ ಟೌನ್‌ಶಿಫ್‌ಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಸ್ಥಳ ಮತ್ತು ವಿಸ್ತೀರ್ಣವನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಸದರಿ ಕಾಮಗಾರಿಗಳಿಗೆ ಟೆಂಡರ್ ಕರೆದು ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಇ) ಸದರಿ ಯೋಜನೆಗೆ ಖರ್ಚಾಗಲಿರುವ ಅಂದಾಜು ಮೊತ್ತ ಎಷ್ಟು ?
(ಯೋಜನಾವಾರು ಮಾಹಿತಿ ನೀಡುವುದು)

## ಆರ್ಥಿಕ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧ (೩೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕರಾವಳಿ ಮತ್ತು ಮಲೆನಾಡು ಪ್ರದೇಶದಲ್ಲಿ ನಿರಂತರವಾಗಿ ನಾಲ್ಕು, ತಿಂಗಳು ಸುರಿದ ಮಳೆ ಮತ್ತು ಅದರಿಂದ ಕಾಡಿದ ಕೊಳೆ ರೋಗದಿಂದಾಗಿ ವ್ಯಾಪಕವಾಗಿ ಬೆಳೆ ಹಾನಿ ಆಗುವುದರ ಜೊತೆಗೆ ಅಡಿಕೆ ಇಳುವರಿ ಗಣನೀಯವಾಗಿ ಕುಂಠಿತಗೊಂಡಿರುವುದರಿಂದ, ಅಡಿಕೆ ಬೆಳೆಗಾರರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರತಿ ವರ್ಷ ಕೊಳೆ ರೋಗದ ಆತಂಕ ಇದ್ದರೂ ಈ ಸಲದ ಮಳೆಗಾಲ ಮಾತ್ರ ಅಡಿಕೆ ಬೆಳೆಗಾರರಿಗೆ ಬೆಳೆ ಮತ್ತು ಆದಾಯದಲ್ಲಿ ದೊಡ್ಡ ನಷ್ಟ ನೀಡಿದ್ದು, ಅತೀವ ಸಂಕಷ್ಟಕ್ಕೆ ಸಿಲುಕಿರುವ ಬೆಳೆಗಾರರ ನೆರವಿಗೆ ಸರ್ಕಾರ ಇದೂವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಅಡಿಕೆ ಬೆಳೆಯುವ ಪ್ರಮುಖ ಪ್ರದೇಶಗಳಲ್ಲಿ ಈ ಬಾರಿ ಬೆಳೆಯ ಪ್ರಮಾಣ ಸುಮಾರು ಶೇ.೪೦ರಷ್ಟು ನಷ್ಟ ಆಗಿದ್ದು, ಈ ಸಂಕಷ್ಟದ ಪರಿಸ್ಥಿತಿಯಲ್ಲಿ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ ?

# ನಗರ ಸ್ಥಳೀಯ ಸಂಸ್ಥೆಗಳಿಗೆ 15ನೇ ಹಣಕಾಸು ಆಯೋಗದ ಅನುದಾನ ಖೋತಾ ಆಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨ (೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಲವಾರು ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆಗಳು) ಚುನಾಯಿತ ಸದಸ್ಯರುಗಳು ಇಲ್ಲದೇ ಇರುವುದರಿಂದ ಕೇಂದ್ರ ಸರ್ಕಾರದ ೧೫ನೇ ಹಣಕಾಸು ಆಯೋಗದ ಅನುದಾನ ಪಡೆಯಲು ಅರ್ಹವಾಗಿಲ್ಲದ ಕಾರಣದಿಂದಾಗಿ ಸಾಕಷ್ಟು ಅನುದಾನ ಖೋತಾ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಚುನಾಯಿತ ಸದಸ್ಯರುಗಳು ಇಲ್ಲದೇ ಇರುವುದರಿಂದ ಕೇಂದ್ರ ಸರ್ಕಾರದ ೧೫ನೇ ಹಣಕಾಸು ಆಯೋಗದ ಅನುದಾನ ಪಡೆಯಲು ಅರ್ಹವಾಗಿಲ್ಲದ ನಗರ ಸ್ಥಳೀಯ ಸಂಸ್ಥೆಗಳು (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆಗಳು) ಯಾವುವು ; ಮತ್ತು ಖೋತಾ ಅಗಿರುವ ಅನುದಾನದ ವಿವರಗಳನ್ನು ಒದಗಿಸುವುದು ;

(ಇ) ಕೇಂದ್ರ ಸರ್ಕಾರದಿಂದ ರಾಜ್ಯದ ನಗರಗಳಿಗೆ ಬರುತ್ತಿದ್ದ ಅನುದಾನ ಸ್ಥಗಿತಗೊಂಡಿದ್ದು, ಆ ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗೆ ಇದು ಮಾರಕವಾಗಿ ಪರಿಣಮಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಮುಂದೆ ಏನು ಕ್ರಮ ವಹಿಸಲಿದೆ ?

# ಕೆ.ಎಂ.ಎಫ್ ಅಧಿಕಾರಿಗಳು ಹಾಗೂ ನೌಕರರ ವೇತನ ಪರಿಷ್ಕರಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩ (೩೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಏಳನೇ ವೇತನ ಆಯೋಗದ ವರದಿ ಪ್ರಕಾರ ವೇತನ ಮತ್ತು ಸೌಲಭ್ಯಗಳನ್ನು ರಾಜ್ಯ ಹಾಲು ಉತ್ಪಾದಕರ ಮಹಾಮಂಡಳದ (ಕೆಎಂಎಫ್) ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಇದುವರೆಗೂ ಜಾರಿಗೊಳಿಸದೇ ಇರುವುದರಿಂದ, ಅವರುಗಳು ಅನಿರ್ಧಿಷ್ಟಾವಧಿ ಮುಷ್ಕರ ನಡೆಸಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಏಳನೇ ವೇತನ ಆಯೋಗದ ವರದಿ ಪ್ರಕಾರ ವೇತನ ಮತ್ತು ಸೌಲಭ್ಯಗಳನ್ನು ರಾಜ್ಯ ಹಾಲು ಉತ್ಪಾದಕರ ಮಹಾಮಂಡಳದ (ಕೆಎಂಎಫ್) ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಇದುವರೆಗೂ ಜಾರಿಗೊಳಿಸದೇ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ, ಸರ್ಕಾರವು ಸದರಿ ಸಿಬ್ಬಂದಿಗಳಿಗೆ ಏಳನೇ ವೇತನ ಆಯೋಗದ ವರದಿ ಪ್ರಕಾರ ವೇತನ ಮತ್ತು ಸೌಲಭ್ಯಗಳನ್ನು ಸಂಪೂರ್ಣವಾಗಿ ಜಾರಿ ಮಾಡಿ ಕೆಎಂಎಫ್ ನೌಕರರಿಗೆ ನ್ಯಾಯಯುತವಾಗಿ ವೇತನ ಪರಿಷ್ಕರಣೆ ಹಾಗೂ ಅದರಿಂದ ದೊರೆಯಬೇಕಾಗಿದ್ದ ಆರ್ಥಿಕ ಸೌಲಭ್ಯಗಳನ್ನು ನೀಡಲು ಕ್ರಮವಹಿಸುವುದು ಯಾವಾಗ ?

## "ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ" ಯಿಂದ ತೆಂಗು ಬೆಳೆಗಾರರಿಗೆ ಒದಗಿಸಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪ (೪೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳಲ್ಲಿ "ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿ" ವತಿಯಿಂದ ಎಷ್ಟು ಜನ ತೆಂಗು ಬೆಳೆಗಾರರು ವಿವಿಧ ರೀತಿಯ ನೆರವು, ಸಹಾಯಧನ ಮತ್ತು ಸೌಲಭ್ಯಗಳನ್ನು ಪಡೆದಿದ್ದಾರೆ ;

(ಆ) ಪ್ರತಿ ಫಲಾನುಭವಿ ಪಡೆದಿರುವ ವಿವಿಧ ರೀತಿಯ ನೆರವು, ಸಹಾಯಧನ ಮತ್ತು ಸೌಲಭ್ಯಗಳು ಯಾವುವು ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಇ) ವಿವಿಧ ರೀತಿಯ ನೆರವು, ಸಹಾಯಧನ ಮತ್ತು ಸೌಲಭ್ಯಗಳನ್ನು ಪಡೆಯಲು ಪ್ರತಿಯೊಬ್ಬ ಫಲಾನುಭವಿಯು ಸಲ್ಲಿಸಿರುವ ದಾಖಲಾತಿಗಳು ಯಾವುವು ? (ಪ್ರತಿಯೊಬ್ಬ ಫಲಾನುಭವಿಯು ಸಲ್ಲಿಸಿರುವ ಎಲ್ಲಾ ಸಂಪೂರ್ಣ ದಾಖಲಾತಿಗಳ ಪ್ರತಿಗಳನ್ನು ಪ್ರತ್ಯೇಕವಾಗಿ ಒದಗಿಸುವುದು)

## ಚಿಕ್ಕಮಗಳೂರಿನಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪಿಸುವ ಯೋಜನೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫ (೪೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಕಿರು ವಿಮಾನ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ವಿಮಾನ ನಿಲ್ದಾಣಕ್ಕೆ ಅಗತ್ಯವಿರುವ ಜಾಗವನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಅಗತ್ಯವಿರುವ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ ;

(ಇ) ಹಾಗಿದ್ದಲ್ಲಿ, ಭೂಸ್ವಾಧೀನಕ್ಕಾಗಿ ಇದುವರೆವಿಗೂ ಎಷ್ಟು ಅನುದಾನ ಬಿಡುಗಡೆಯಾಗಿದೆ; ಇನ್ನೂ ಎಷ್ಟು ಅನುದಾನ ಬಿಡುಗಡೆಯಾಗಲು ಬಾಕಿ ಇದೆ ;

(ಈ) ಬಾಕಿ ಅನುದಾನವನ್ನು ಯಾವಾಗ ಬಿಡುಗಡೆ ಮಾಡಿ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗುವುದು ; ಯಾವ ಕಾಲಮಿತಿಯಲ್ಲಿ ಚಿಕ್ಕಮಗಳೂರಿನಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪಿಸಲಾಗುವುದು ?

## ವಾಣಿಜ್ಯ ಮಳಿಗೆಗಳ ಹರಾಜು ಪ್ರಕ್ರಿಯೆಯಲ್ಲಿನ ವಿಳಂಬದಿಂದಾಗಿ ಉಂಟಾಗಿರುವ ಆರ್ಥಿಕ ನಷ್ಟದ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬ (೪೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ನಗರಸಭೆ ವ್ಯಾಪ್ತಿಯಲ್ಲಿ ಎಷ್ಟು ವಾಣಿಜ್ಯ ಮಳಿಗೆಗಳಿವೆ ; ಈ ಮಳಿಗೆಗಳಿಂದ ವಾರ್ಷಿಕ ಎಷ್ಟು ಆದಾಯ ಬರುತ್ತಿದೆ ; ಎಷ್ಟು ವಾಣಿಜ್ಯ ಮಳಿಗೆಗಳು ಖಾಲಿ ಇವೆ, ಖಾಲಿ ಉಳಿದಿರಲು ಕಾರಣಗಳೇನು ;

(ಆ) ನಗರಸಭೆ ವ್ಯಾಪ್ತಿಯಲ್ಲಿ ಹೊಸ ವಾಣಿಜ್ಯ ಮಳಿಗೆಗಳ ನಿರ್ಮಾಣ ಕಾಮಗಾರಿ ಪೂರ್ಣಗೊಂಡು ೦೨ ವರ್ಷ ಕಳೆದರೂ ಮಳಿಗೆಗಳನ್ನು ಹರಾಜು ಮಾಡದೆ ಇರುವುದರಿಂದ ನಗರಸಭೆಗೆ ಆರ್ಥಿಕ ನಷ್ಟವುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಖಾಲಿ ಉಳಿದಿರುವ ಮಳಿಗೆಗಳನ್ನು ಯಾವಾಗ ಹರಾಜು ಮಾಡಲಾಗುವುದು ;

(ಈ) ಮಳಿಗೆಗಳನ್ನು ಹರಾಜು ಮಾಡದೆ ಖಾಲಿ ಉಳಿಸಿಕೊಂಡು ನಗರಸಭೆಗೆ ಆರ್ಥಿಕ ನಷ್ಟ ಉಂಟು ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೆ ?

## ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ರಚಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭ (೪೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕೆಂದು ಸಾರ್ವಜನಿಕರಿಂದ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಇ) ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲು ಇರುವ ತೊಡಕುಗಳೇನು ; ಹಾಗಿದ್ದಲ್ಲಿ ಪ್ರತ್ಯೇಕವಾದ ಹಾಲು ಒಕ್ಕೂಟವನ್ನು ಸ್ಥಾಪಿಸಲಾಗುವುದು ಯಾವಾಗ ; ಈ ನಿಟ್ಟಿನಲ್ಲಿ ಆಗಿರುವ ಪಗತಿ ಏನು ?

## ನಗರೋತ್ಥಾನ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮ (೦೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ನಗರೋತ್ಥಾನ ಯೋಜನೆಯ ಅನ್ವಯ ನಗರ ಸಭೆ ಮತ್ತು ಪುರ ಸಭೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ನಗರ ಸಭೆ ಮತ್ತು ಪುರ ಸಭೆವಾರು ವಿವರ ನೀಡುವುದು)

(ಆ) ಪೌರ ಕಾರ್ಮಿಕರ ಗೃಹ ಭಾಗ್ಯ ಯೋಜನೆಯ ಅನ್ವಯ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಪೌರ ಕಾರ್ಮಿಕರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಕೊಳಗೇರಿಗಳಲ್ಲಿ ವಾಸ ಮಾಡುತ್ತಿರುವವರಿಗೆ ವಸತಿ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯ (೦೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಕೊಳಗೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡುತ್ತಿದೆ ;

(ಇ) ಸದರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ಯುವಕರಿಗೆ ಉದ್ಯೋಗ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕೊಳಗೇರಿಗಳಲ್ಲಿ ವಾಸಿಸುತ್ತಿರುವವರಿಗೆ ವಸತಿ ವ್ಯವಸ್ಥೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಇದುವರೆಗೆ ಎಷ್ಟು ಮನೆಗಳನ್ನು ನಿರ್ಮಿಸಿ ಹಂಚಿಕೆ ಮಾಡಲಾಗಿದೆ ?

## ಸಹಕಾರ ಸಂಸ್ಥೆಗಳಿಗೆ ನೀಡಿರುವ ಮೊತ್ತದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೦ (೦೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಸಾಲ ನೀಡಲು ಸಹಕಾರಿ ಸಂಸ್ಥೆಗಳಿಗೆ ನೀಡಲಾದ ಮೊತ್ತವೆಷ್ಟು ; ಸದರಿ ಮೊತ್ತದ ಮರು ಪಾವತಿ ಕುರಿತು ಕೈಗೊಂಡ ಕ್ರಮಗಳೇನು ;

(ಆ) ಸರ್ಕಾರವು ಸಹಕಾರ ಇಲಾಖೆಯ ಮೂಲಕ ನೀಡಿದ ಸಹಾಯ ಧನವನ್ನು ಸಹಕಾರಿ ಸಂಸ್ಥೆಗಳು ಯಾವ ಯಾವ ಬಾಬ್ತುಗಳಿಗೆ ವೆಚ್ಚ ಮಾಡಬಹುದು ; (ಸಹಕಾರಿ ಸಂಸ್ಥೆಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಯಾವ ಯಾವ ಸಹಕಾರಿ ಸಂಸ್ಥೆಗಳಿಗೆ ಸಹಾಯ ಧನವನ್ನು ನೀಡಲಾಗಿದೆ ; ಎಷ್ಟು ಮೊತ್ತದ ಸಹಾಯ ಧನವನ್ನು ನೀಡಲಾಗಿದೆ ? (ಸಹಕಾರಿ ಸಂಸ್ಥೆಯ ಹೆಸರಿನೊಂದಿಗೆ ಮಾಹಿತಿ ನೀಡುವುದು)

## ರಾಜ್ಯದ ಪುರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶೌಚಾಲಯಗಳ ನಿರ್ಮಾಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೧ (೦೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಬಯಲು ಶೌಚಾಲಯ ಮುಕ್ತ ಸಂಸ್ಥೆಗಳೆಂದು ಗುರುತಿಸಲಾಗಿರುವ ಪುರಸಭೆ ಸ್ಥಳೀಯ ಸಂಸ್ಥೆಗಳಾವುವು ;

(ಇ) ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ರಾಜ್ಯಕ್ಕೆ ದೊರೆತ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸ್ವಚ್ಛ ಭಾರತ್ ಯೋಜನೆಗೆ ರಾಜ್ಯ ಸರ್ಕಾರವು ಎಷ್ಟು ಅನುದಾನ ನೀಡಿದೆ; ಈ ಅನುದಾನವನ್ನು ಯಾವ ರೀತಿ ವೆಚ್ಚ ಮಾಡಿದೆ ; ರಾಜ್ಯ ಸರ್ಕಾರದ ಅನುದಾನದಿಂದ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ?

## ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೨ (೦೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ತೆರೆಯಲಾಗಿದೆ ಹಾಗೂ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಯಾವುದಾದರೂ ಯೋಜನೆಯನ್ನು ಕೈಗೊಳ್ಳಲಾಗಿದೆಯೇ ; ಇಲ್ಲದ್ದಿದಲ್ಲಿ, ಯೋಜನೆಗಳನ್ನು ಕೈಗೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಈಗಾಗಲೇ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಸಹಾಯಧನ ನೀಡಲಾಗಿದೆಯೇ ? (ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿನ ಸ್ಪಾಂಜೆ ಐರನ್ ಮತ್ತು ಉಕ್ಕು ಕೈಗಾರಿಕೆಗಳಿಂದ ಭೂ ಸಂತ್ರಸ್ಥಗೊಂಡಿರುವ ರೈತರಿಗೆ ನೆರವು ನೀಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩ (೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿನ ಕೆಲವು ಸ್ಪಾಂಜ್ ಐರನ್ ಮತ್ತು ಸ್ಟೀಲ್ ಕೈಗಾರಿಕೆಗಳಿಂದಾಗಿ ಭೂಮಿಯನ್ನು ಕಳೆದುಕೊಂಡು ಉದ್ಯೋಗ ಸಿಗುತ್ತದೆಂಬ ಭರವಸೆಯಲ್ಲಿದ್ದ ರೈತರಿಗೆ ಸದರಿ ಕೈಗಾರಿಕೆಗಳು ಉದ್ಯೋಗ ನೀಡದೆ ತಮ್ಮ ಹೊಣೆಗಾರಿಕೆಯಿಂದ ನುಣುಚಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರವು ಬಾಧಿತ ರೈತರಿಗೆ ಸಹಾಯ ಮಾಡುವುದೇ ; ಬಂದಿದ್ದಲ್ಲಿ, ಸಂತ್ರಸ್ಥ ರೈತರಿಗೆ ಸರ್ಕಾರವು ಯಾವ ರೀತಿ ನೆರವು ನೀಡಲಿದೆ ;

(ಆ) ಕೆಲವು ಕೈಗಾರಿಕೆಗಳು ಅತಿಯಾದ ಮಾಲಿನ್ಯವನ್ನುಂಟು ಮಾಡುತ್ತಿವೆಯೆಂಬ ವರದಿಗಳು ಬರುತ್ತಿದ್ದು, ಮಾಲಿನ್ಯ ನಿಯಂತ್ರಣಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು ?

## ಅರಸೀಕೆರೆ ತಾಲ್ಲೂಕು ಚಲುವನಹಳ್ಳಿ ಗ್ರಾಮದ ಸರ್ಕಾರಿ ಕಟ್ಟಡದಲ್ಲಿ ಅನಧಿಕೃತ ಹಾಲಿನ ಡೈರಿ ನಡೆಸುತ್ತಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪ (೧೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಸಹಕಾರ ಇಲಾಖೆಯಡಿ ನೋಂದಾಯಿಸಲ್ಪಟ್ಟ ಹಾಲು ಉತ್ಪಾದಕರ ಮಹಿಳಾ ಸಂಘ ಸಂಸ್ಥೆಗಳೆಷ್ಟು ; ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳೆಷ್ಟು ; ಸ್ಥಗಿತಗೊಂಡಿರುವ ಸಂಘ ಸಂಸ್ಥೆಗಳೆಷ್ಟು ; (ಸಂಘ ಸಂಸ್ಥೆಗಳವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸರ್ಕಾರಿ / ಖಾಸಗಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಮಹಿಳಾ ಸಂಘ ಸಂಸ್ಥೆಗಳ ವಿವರ ನೀಡುವುದು ; ಸ್ಥಗಿತಗೊಂಡ ಹಾಲು ಉತ್ಪಾದಕರ ಸಂಘ ಸಂಸ್ಥೆಯು ಹೊಂದಿರುವ ಸರ್ಕಾರಿ ಕಟ್ಟಡಗಳನ್ನು ಇಲಾಖೆಯ ಸುಪರ್ದಿಗೆ ಪಡೆಯಲಾಗಿದೆಯೇ ; ಇಂತಹ ಕಟ್ಟಡಗಳಲ್ಲಿ ಅನಧಿಕೃತ ಹಾಲು ಮಾರಾಟದ ವಹಿವಾಟು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಹಾಸನ ಜಿಲ್ಲೆ ಅರಸೀಕರೆ ತಾಲ್ಲೂಕು ಬಾಣಾವಾರ ಹೋಬಳಿಯ ಚಲುವನಹಳ್ಳಿ ಗ್ರಾಮದಲ್ಲಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಘ ಸರ್ಕಾರಿ ಕಟ್ಟಡದಲ್ಲಿ ಅನಧಿಕೃತವಾಗಿ ಎಸ್.ಎಸ್.ಡೈರಿ ಹೆಸರಿನ ಸಂಸ್ಥೆಯು ಹಾಲು ಮಾರಾಟ ಮಾಡುತ್ತಿರುವುದರಿಂದ ಸರ್ಕಾರದ ಯೋಜನೆಗಳು ಇಲಾಖೆಯು ಮುಖಾಂತರ ತಲುಪದೇ ಗ್ರಾಮಸ್ಥರಿಗೆ ಅನ್ಯಾಯವಾಗುತ್ತಿರುವುದನ್ನು ಗ್ರಾಮಸ್ಥರು ವಿರೋಧಿಸಿದ್ದು ಅದು ಸ್ಥಳೀಯ ಪತ್ರಿಕೆಯಲ್ಲಿ ಬಂದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಸ್ಥಿತಿಗತಿ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೬೫ (೧೪೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಹೊಸದಾಗಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯಾರಂಭ ಮಾಡಿವೆ ; ಈ ಸಣ್ಣ ಕೈಗಾರಿಕೆಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಸಣ್ಣ ಕೈಗಾರಿಕೆಗಳನ್ನು ಮುಚ್ಚಲ್ಪಟಿವೆ ; ಮಚ್ಚಲು ಕಾರಣಗಳೇನು: ; (ಅವುಗಳ ವಿವರ ನೀಡುವುದು)

(ಇ) ಪ್ರಸಕ್ತ ಹಣಕಾಸಿನ ವರ್ಷದಲ್ಲಿ ಸಣ್ಣ ಕೈಗಾರಿಕೆಗಳಿಗೆ ನೀಡಿರುವ ಸಾಲದ ಮತ್ತು ಸಬ್ಸಿಡಿ ಪ್ರಮಾಣ ಎಷ್ಟು ; ಸಾಲ ಮತ್ತು ಸಬ್ಸಿಡಿ ಪಡೆದ ಕಂಪನಿಗಳ ವಿವರ ನೀಡುವುದು ?

## ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೬ (೧೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ದಾಖಲಾದ ಅಕ್ರಮ ಗಣಿಗಾರಿಕೆ ಪ್ರಕರಣಗಳು ಎಷ್ಟು ; ಈ ಪ್ರಕರಣದಲ್ಲಿ ಭಾಗಿಯಾದ ಖಾಸಗಿ ವ್ಯಕ್ತಿಗಳು ಹಾಗೂ ಇಲಾಖೆಯ ಅಧಿಕಾರಿಗಳ ಮೇಲೆ ದಾಖಲಾದ ಪ್ರಕರಣಗಳು ಯಾವುವು ; ತಪ್ಪಿತಸ್ಥರ ಮೇಲೆ

ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು, ಪ್ರಕರಣಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಇತ್ತೀಚೆಗೆ ಕಲಬುರ್ಗಿ ಜಿಲ್ಲೆಯ ತಾಲ್ಲೂಕಿನ ಕೂಸುನೂರ ಗ್ರಾಮ ಸರ್ವೆ ನಂ.೧೨೬, ೧೨೭ ಮತ್ತು ೧೩೪ರ ಪಟ್ಟ ಜಮೀನುಗಳಲ್ಲಿ ಅಕ್ರಮವಾಗಿ ಕಾನೂನು ಬಾಹಿರವಾಗಿ ಮುರುನ್ ಗಣಿಗಾರಿಕೆ ನಡೆಸುತ್ತಿರುವುದು ಇಲ್ಲಿಯ ಅಧಿಕಾರಿಗಳ ಗಮನಕ್ಕೆ ಬಂದರೂ ಸಹ ಯಾವುದೇ ಕ್ರಮಗಳನ್ನು ಕೈಗೊಳ್ಳದೇ ಇರಲು ಕಾರಣವೇನು ;

(ಇ) ಈ ಅಕ್ರಮ ಗಣಿಗಾರಿಕೆಯಿಂದ ಅಕ್ಕಪಕ್ಕದ ಜಮೀನಿನ ರೈತರಿಗೆ ಭೂಮಿಯ ತೇವಾಂಶದ ಕೊರತೆ ಹಾಗೂ ಬೆಳೆ ನಷ್ಟ ಅನುಭವಿಸುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕಾಲಮಿತಿಯಲ್ಲಿ ಸಮಸ್ಯೆಯನ್ನು ಬಗೆ ಹರಿಸಲಾಗುತ್ತದೆ ಹಾಗೂ ಯಾವ ಕಾಲಮಿತಿಯಲ್ಲಿ ಈ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಕ್ರಮ ಕೈಗೊಳ್ಳಲಾಗುವುದು ?

## ತೊಗರಿ ಬೆಳೆಗೆ ಬೆಂಬಲ ಬೆಲೆ ನಿಗದಿಪಡಿಸುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೭ (೧೧೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಉತ್ಪಾದನೆಯಾದ ಒಟ್ಟು ತೊಗರಿ ಸಂಗ್ರಹಣೆ ಎಷ್ಟು; ಕೇಂದ್ರ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ ಎಷ್ಟು ಹಾಗೂ ರಾಜ್ಯ ಸರ್ಕಾರ ನಿಗದಿಪಡಿಸಿದ ಹೆಚ್ಚುವರಿ ಬೆಂಬಲ ಬೆಲೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರವು ನೀಡುತ್ತಿರುವ ಹೆಚ್ಚುವರಿ ಬೆಂಬಲ ಬೆಲೆ ೪೫೦ ರೂ ಕಡಿಮೆ ಇದ್ದು ರಾಜ್ಯದ ರೈತರ ಆದಾಯ ಕಡಿಮೆಯಾಗುತ್ತಿದ್ದು ಸರ್ಕಾರವು ಕೇಂದ್ರ ಸರ್ಕಾರಕ್ಕೆ ತೊಗರಿ ಬೆಳೆಗೆ ನಿಗದಿಪಡಿಸಿದ್ದ ಎಂಎಸ್‌ಪಿ ಯನ್ನು ಹೆಚ್ಚಿಸುವಂತೆ ಪ್ರಸ್ತಾವನೆ ಸಲ್ಲಿಸುವ ಹಾಗೂ ರಾಜ್ಯ ಸರ್ಕಾರ ನೀಡಲಾಗುತ್ತಿರುವ ಹೆಚ್ಚುವರಿ ಬೆಂಬಲ ಬೆಲೆಯನ್ನು ೪೫೦ ರಿಂದ ೬೫೦ ಕ್ಕೆ ಹೆಚ್ಚಿಸುವ ಆಲೋಚನೆ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಹೆಚ್ಚಿನ ಬೆಂಬಲ ಬೆಲೆಯನ್ನು ನೀಡಲಾಗುತ್ತದೆ ?

## ಸಹಕಾರ ಇಲಾಖೆಯಿಂದ ರೈತರಿಗೆ ಇರುವ ಸಾಲದ ಯೋಜನೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೮ (೭೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಿಂದ ಬುಡಕಟ್ಟು ಜನಾಂಗದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ವಿವರ ನೀಡುವುದು)

(ಇ) ರೈತರಿಗೆ ವಾಹನ ಸಾಲ ನೀಡುವ ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ ಮತ್ತು ನೀಡಲಾಗಿರುವ ಸಬ್ಸಿಡಿ ಹಣವೆಷ್ಟು ? (ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ರೈತರ ತೋಟಗಳಿಗೆ ಕಾಡು ಪ್ರಾಣಿಗಳಿಂದಾದ ಹಾನಿಗೆ ಪರಿಹಾರ ನೀಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೯ (೭೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಹವಾಮಾನ ವೈಪರೀತ್ಯ ಹಾನಿ ಹಾಗೂ ಇನ್ನಿತರೆ ಆನೆ ದಾಳಿ ಕಾಡು ಪ್ರಾಣಿಗಳಿಂದ ಬೆಳೆ ಹಾನಿಯಾದ ಸಂದರ್ಭಗಳಲ್ಲಿ ರೈತರಿಗೆ ಬೆಳೆ ಪರಿಹಾರ ನೀಡಲಾಗುತ್ತಿದ್ದು, ಉತ್ತರ ಕನ್ನಡ ಜಿಲ್ಲೆಯಲ್ಲಿ ಕೆಂಪು ಮತ್ತು ಕಪ್ಪುಮೂತಿ ಮಂಗಗಳ ಕಾಟದಿಂದ ಇಲ್ಲಿನ ಅನೇಕ ಬುಡಕಟ್ಟು ಮತ್ತು ಇತರೆ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬೆಳೆ ಪರಿಹಾರ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ?

## ಕೆ.ಡಿ.ಎಫ್ ಗೆ ೪ಜಿ ವಿನಾಯಿತಿ ನೀಡುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦ (೫೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ಇದರ ಉತ್ಪನ್ನಗಳು ಯಾವುವು ; ಇದರ ಧ್ಯೆಯೋದ್ದೇಶಗಳೇನು ; (ವಿವರ ನೀಡುವುದು)

(ಆ) ಈ ಉತ್ಕೃಷ್ಟ ಉತ್ಪನ್ನಗಳಿಗೆ ಸರ್ಕಾರ ಪ್ರೋತ್ಸಾಹ ನೀಡಲು ಕೈಗೊಂಡಿರುವ ಕ್ರಮಗಳೇನು ;

(ಇ) ಈ ಸಂಸ್ಥೆ ಉತ್ಪಾದಿಸುವ ಉತ್ಪನ್ನಗಳನ್ನು ಸರ್ಕಾರ ಖರೀದಿ ಮಾಡಲು ೪ಜಿ ವಿನಾಯಿತಿ ನೀಡಲು ಸರ್ಕಾರ ಮುಂದಾಗುವುದೆ ?

## ರಾಯಚೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಾಣ ಮಾಡಲಾದ ಕೈಗಾರಿಕಾ ಪ್ರದೇಶಗಳ ಬಗ್ಗೆ

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧ (೭೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣ ಮಾಡಲಾದ ಕೈಗಾರಿಕಾ ಪ್ರದೇಶಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ಹಾಗೂ ಭೂಸ್ವಾಧೀನ ಮಾಡಿಕೊಂಡ ನಂತರ ಸದರಿ ಜಮೀನನ್ನು ಮಂಡಳಿ ವಶಕ್ಕೆ ಪಡೆಯಲಾಗಿದೆಯೇ ; (ವಿವರ ನೀಡುವುದು)

(ಇ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ ; ಕಳೆದ ೫ ವರ್ಷದಲ್ಲಿ ಈ ಪ್ರದೇಶದಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು ; ಕಾಮಗಾರಿಗಳು ಯಾವ ಹಂತದಲ್ಲಿವೆ ?

## ಪೌರಾಡಳಿತ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೨ (೧೫೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪೌರಾಡಳಿತ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಹುದ್ದೆಗಳೆಷ್ಟು ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು, ಸಂಸ್ಥೆವಾರು ಮತ್ತು ಹುದ್ದೆವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪೌರಾಡಳಿತ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಹುದ್ದೆಗಳಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾಪ್ ಕಾಮ್ಸ್‌ಗಳನ್ನು ಸ್ಥಳಾಂತರಗೊಳಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩ (೧೫೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಪ್ ಕಾಮ್ಸ್‌ಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೆಲವು ಹಾಪ್ ಕಾಮ್ಸ್‌ಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಹತ್ತು ವರ್ಷಗಳಲ್ಲಿ ಎಷ್ಟು ಹಾಪ್ ಕಾಮ್ಸ್‌ಗಳನ್ನು ಮುಚ್ಚಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹಾಪ್ ಕಾಮ್ಸ್‌ಗಳನ್ನು ಮುಚ್ಚುವ ಬದಲು ಹೊಸ ಬಡಾವಣೆಗಳಿಗೆ ಸ್ಥಳಾಂತರಗೊಳಿಸಬಹುದಲ್ಲವೇ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ವರುಣ ವಿಧಾನಸಭಾ ವ್ಯಾಪ್ತಿಯಲ್ಲಿನ ಹಳ್ಳಿಗಳಲ್ಲಿರುವ ಗುಡಿ ಮತ್ತು ಸಣ್ಣ ಕೈಗಾರಿಕೆಗಳ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೪ (೧೫೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವರುಣ ವಿಧಾನಸಭಾ ವ್ಯಾಪ್ತಿಯಲ್ಲಿನ ಹಳ್ಳಿಗಳಲ್ಲಿರುವ ಗುಡಿ ಮತ್ತು ಸಣ್ಣ ಕೈಗಾರಿಕೆಗಳೆಷ್ಟು ; (ಪಂಚಾಯಿತಿವಾರು ವಿವರ ಒದಗಿಸುವುದು)

(ಆ) ವರುಣ ವಿಧಾನಸಭಾ ವ್ಯಾಪ್ತಿಯಲ್ಲಿನ ಹಳ್ಳಿಗಳಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಹೊಸದಾಗಿ ಯಾವ ಯಾವ ರೀತಿಯ ಗುಡಿ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ವರುಣ ವಿಧಾನಸಭಾ ವ್ಯಾಪ್ತಿಯಲ್ಲಿನ ಹಳ್ಳಿಗಳಲ್ಲಿ ಕಳೆದು ಹತ್ತು ವರ್ಷಗಳಲ್ಲಿ ಗುಡಿ ಮತ್ತು ಸಣ್ಣ ಕೈಗಾರಿಕೆಗಳಿಗೆ ಒದಗಿಸಿದ ಅನುದಾನವೆಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ KUWSDB ಅಡಿ ಜಾರಿಗೊಳ್ಳುತ್ತಿರುವ ಯೋಜನೆಗಳ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೫ (೧೫೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಸ್ತುತ **KUWSDB** ಅಡಿ ಜಾರಿಗೊಳ್ಳುತ್ತಿರುವ ಯೋಜನೆಗಳಾವುವು ಮತ್ತು ಸದರಿ ಯೋಜನೆಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ;

(ವಿಧಾನಸಭಾ ಕ್ಷೇತ್ರವಾರು ಮತ್ತು ಯೋಜನೆವಾರು ಮಾಹಿತಿ ನೀಡುವುದು)

(ಆ) ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ **KUWSDB** ಅಡಿ ಮುಂದಿನ ಹತ್ತು ವರ್ಷಗಳಲ್ಲಿ ಅವಶ್ಯವಿರುವ ಯೋಜನೆಗಳಾವುವು ಮತ್ತು ಸದರಿ ಯೋಜನೆಗಳಿಗೆ ಅವಶ್ಯವಿರುವ ಅನುದಾನವೆಷ್ಟು ? (ವಿಧಾನಸಭಾ ಕ್ಷೇತ್ರವಾರು ಮತ್ತು ಯೋಜನೆವಾರು ಮಾಹಿತಿ ನೀಡುವುದು)

## ಮೈಸೂರಿನಲ್ಲಿ IT City ಮತ್ತು KWIN City ಸ್ಥಾಪಿಸಿರುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೬ (೧೫೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) **KWIN City** ಯೋಜನೆಯು ಯಾವ ಯಾವ ಉದ್ದೇಶಗಳನ್ನು ಒಳಗೊಂಡಿದೆ ;

(ಆ) ಈ ಯೋಜನೆಯ ಅನುಷ್ಠಾನಕ್ಕೆ ಇರಬೇಕಾದ ಮೂಲಭೂತ ಸೌಕರ್ಯಗಳು ಯಾವುವು ;

(ಇ) ಹಾಗಿದ್ದಲ್ಲಿ, ಮೈಸೂರು ಜಿಲ್ಲೆಯಲ್ಲಿ **KWIN City** ಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಈ) ಉದ್ದೇಶಿಸಿದ್ದಲ್ಲಿ, ಈ ಯೋಜನೆಯ ಅನುಷ್ಠಾನದ ಕ್ರಮವಾಗಿ ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಇತರೆ ಮಂಜೂರಾತಿ ವಿವರಗಳನ್ನು ಒದಗಿಸುವುದು ?

## ಬೀದರ್ ಜಿಲ್ಲೆಯ ಕೊಳಚೆ ನಿರ್ಮೂಲನೆ ಮಂಡಳಿ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭ (೬೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಗೆ ಕೊಳಚೆ ನಿರ್ಮೂಲನೆ ಮಂಡಳಿಯಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿದೆ ; (ಕಾಮಗಾರಿ ವಿವರ ನೀಡುವುದು)

(ಆ) ಕೊಳಚೆ ನಿರ್ಮೂಲನೆ ಮಂಡಳಿಗೆ ಸರ್ಕಾರದಿಂದ ಪ್ರತಿ ವರ್ಷ ಮಂಜೂರಾಗುವ ಮೊತ್ತವೆಷ್ಟು ; ಯಾವ ಯಾವ ಕಾಮಗಾರಿ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗುವುದು ?

## ಯೋಜನೆಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೮ (೬೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಯಾವುವು ; ಅದರ ಮಾರ್ಗ ಸೂಚಿಗಳೇನು ; (ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಬಿಡುಗಡೆಯಾದ ಮತ್ತು ಬಾಕಿಯಿರುವ ಅನುದಾನವೆಷ್ಟು ; ಬಾಕಿ ಮೊತ್ತ ಬಿಡುಗಡೆ ಮಾಡಲಾಗುವುದು ಯಾವಾಗ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಸರಿಯಾದ ಸಮಯಕ್ಕೆ ಅನುದಾನ ಬಿಡುಗಡೆಯಾಗದೆ ಕಾಮಗಾರಿ ಅನುಷ್ಠಾನವಾಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಯಾದ ಸಮಯಕ್ಕೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಸೌಲಭ್ಯವಿಲ್ಲದಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೯ (೬೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೃಷಿ ಉತ್ಪನ್ನ ಮಾರುಕಟ್ಟೆಗೆ ಬೇಕಾದ ಸಮರ್ಪಕವಾದ ಸ್ಥಳಾವಕಾಶ ಮತ್ತು ಇತರೆ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವುದಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಜಿಲ್ಲೆ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಪಡಿಸಲು ಕೈಗೊಂಡ ಕ್ರಮವೇನು ? (ವಿವರ ಒದಗಿಸುವುದು)

## ಗಣಿಗಾರಿಕೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೦ (೬೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಪ್ರದೇಶಗಳಲ್ಲಿ ಗಣಿಗಾರಿಕೆ ನಡೆಸಲು ಅನುಮತಿ ನೀಡಲಾಗಿದೆ ; (ವಿವರ ನೀಡುವುದು)

(ಆ) ನಿಯಮಬಾಹಿರವಾಗಿ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು ; ಆ ಪೈಕಿ ಎಷ್ಟು ಪ್ರಕರಣಗಳಲ್ಲಿ ಕೇಸನ್ನು ದಾಖಲಿಸಿ, ತಪ್ಪಿತಸ್ಥರ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ಪ್ರಕರಣವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಸ್ಥಳೀಯ ಪೌರ ಕಾರ್ಮಿಕರ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೧ (೬೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು) ಸದರಿ ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಪೌರ ಕಾರ್ಮಿಕರಿಗೆ ಪ್ರಸ್ತುತ ನೀಡಲಾಗುತ್ತಿರುವ ವೇತನ ಮತ್ತು ಇತರೆ ಸವಲತ್ತುಗಳೇನು ; (ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಪೌರ ಕಾರ್ಮಿಕರನ್ನು ವಿದೇಶ ಅಧ್ಯಯನ ಪ್ರವಾಸಕ್ಕೆ ಕಳುಹಿಸಲಾಗಿದೆ ; ಇನ್ನೂ ಎಷ್ಟು ಕಾರ್ಮಿಕರನ್ನು ಪ್ರವಾಸಕ್ಕೆ ಕಳುಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ? (ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೨ (೧೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಯಾವ ದಿನಾಂಕದಿಂದ ಸದರಿ ಹುದ್ದೆಗಳು ಖಾಲಿ ಇವೆ ; ಖಾಲಿ ಇರಲು ಕಾರಣಗಳೇನು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಹಕಾರಿ ವಲಯದಲ್ಲಿ ಹಂಚಲಾಗಿರುವ ನಿವೇಶನ ಮತ್ತು ವಸತಿಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೩ (೧೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರಿ **(Co-Operative)** ವಸತಿ ನಿರ್ಮಾಣ ಸಂಘಗಳ ಮೂಲಕ ಎಷ್ಟು ಬಡಾವಣೆಗಳು ನಿರ್ಮಾಣಗೊಂಡಿವೆ ;

(ಆ) ಈ ಬಡಾವಣೆಗಳ ಮೂಲಕ ಎಷ್ಟು ನಿವೇಶನಗಳನ್ನು ಹಾಗೂ ಗೃಹ ನಿರ್ಮಾಣವನ್ನು ಮಾಡಲಾಗಿದೆ ;

(ಇ) ಕೇಂದ್ರ ಸರ್ಕಾರದ ಯೋಜನೆಗಳನ್ನು ಯಾವ ರೀತಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಮತ್ತು ಸದರಿ ಯೋಜನೆಗಳು ಯಾವುವು ;

(ಈ) ಕಳೆದ ೩ ವರ್ಷಗಳಲ್ಲಿ ಬಡ–ಮಧ್ಯಮ ವರ್ಗದವರಿಗೆ ಎಷ್ಟು ನಿವೇಶನಗಳನ್ನು ವಿತರಿಸಲಾಗಿದೆ ;

(ಉ) ಕೊಡಗು ಜಿಲ್ಲೆಯಲ್ಲಿ ವಿತರಿಸಲಾಗಿರುವ ನಿವೇಶನಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಗಣಿಗಾರಿಕೆಯ ಪರವಾನಿಗೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪ (೫೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ, ವಿಜಯಪುರ, ಗದಗ, ರಾಯಚೂರು ಜಿಲ್ಲೆಗಳಲ್ಲಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆ ಮತ್ತು ಮರಳು ಗಣಿಗಾರಿಕೆಗಳು ಎಷ್ಟು ; ಎಷ್ಟು ಅವಧಿಗೆ ಪರವಾನಿಗೆ ನೀಡಲಾಗಿದೆ ; (ತಾಲ್ಲೂಕುವಾರು, ಪರವಾನಿಗೆ ಸರ್ವೆ ನಂಬರ್ ಸಹಿತ ದಾಖಲೆಯೊಂದಿಗೆ ಮಾಹಿತಿ ನೀಡುವುದು)

(ಆ) ಖಾಸಗಿ ಪಟ್ಟ ಲ್ಯಾಂಡ್‌ನಲ್ಲಿ ಪರವಾನಿಗೆ ಮುಗಿದು ಮರಳು ತೆಗೆಯದೆ ಹಾಗೆ ಉಳಿದಿದ್ದರೆ, ಅದರ ಪರವಾನಿಗೆಯನ್ನು ವಿಸ್ತರಿಸಲು ನಿಯಮಗಳಲ್ಲಿ ಬದಲಾವಣೆ ಮಾಡಬಹುದೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಕ್ರಮ ಗಣಿಗಾರಿಕೆ ಮಾಡಿದವರ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ ಅದರ ತನಿಖಾ ವರದಿಯನ್ನು ನೀಡುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಅಕ್ರಮ ಗಣಿಗಾರಿಕೆಯಲ್ಲಿ ಎಷ್ಟು ಮೊತ್ತದ ಯಂತ್ರೋಪಕರಣಗಳನ್ನು ವಶಪಡಿಸಲಾಗಿದೆ ; ವಶಪಡಿಸಿಕೊಂಡ ಯಂತ್ರೋಪಕರಣಗಳನ್ನು ಎಷ್ಟು ಮೊತ್ತದಲ್ಲಿ ಹರಾಜು ಮಾಡಲಾಗಿದೆ ; ಎಷ್ಟು ಯಂತ್ರೋಪಕರಣಗಳನ್ನು ವಾಪಸ್ ನೀಡಲಾಗಿದೆ ? (ದಾಖಲಾತಿಗಳ ಮುಖಾಂತರ ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೫ (೫೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸ್ಥಳೀಯ ಸಂಸ್ಥೆ ಚುನಾವಣೆ ನಡೆಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಇ) ೨೦೨೪-೨೫ನೇ ಸಾಲಿನ ೧೫ನೇ ಹಣಕಾಸು ಆಯೋಗದಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆಯಾದ ಒಟ್ಟು ಹಣ ಎಷ್ಟು ;

(ಈ) ರಾಜ್ಯದಲ್ಲಿ ಮಹಾನಗರ ಪಾಲಿಕೆಯನ್ನು ನೂತನವಾಗಿ ಯಾವ ಯಾವ ನಗರಗಳಲ್ಲಿ ಮಾಡುವುದಾಗಿ ಸರ್ಕಾರ ಚಿಂತಿಸಿದೆ ;

(ಉ) ರಾಜ್ಯದಲ್ಲಿ ಮಹಾನಗರ ಪಾಲಿಕೆ ಅಡಿಯಲ್ಲಿರುವ ಪರಿಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು ; ಅದರಲ್ಲಿ ಕಾರ್ಯ ನಿರ್ವಹಿಸದೆ ಇರುವ ಘಟಕಗಳು ಎಷ್ಟು ? (ನಗರವಾರು ವಿವರ ನೀಡುವುದು)

## ರೈತರು ಕೃಷಿ ಸಾಲ ಪಡೆದಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೬ (೫೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಸಾಲ ಮಾಡಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಬರ ಹಿನ್ನೆಲೆಯಲ್ಲಿ ರೈತರ ಸಾಲ ಅಥವಾ ಬಡ್ಡಿ ಮನ್ನಾ ಮಾಡಲಾಗಿದೆಯೇ ; ಮನ್ನಾ ಮಾಡಿದ್ದಲ್ಲಿ ಒಟ್ಟು ಎಷ್ಟು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೈತರ ಸಾಲ ಮರುಪಾವತಿಗೆ ನೀಡಿರುವ ಗಡುವು ಎಷ್ಟು ; ಗಡವು ವಿಸ್ತರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕೃಷಿ ಸಂಬಂಧಿತ ಸಾಲವನ್ನು ಅಸಲು ಪಾವತಿಸಿ ಬಡ್ಡಿ ಮನ್ನಾ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. **O219**/500 ಪ್ರತಿಗಳು/27-02-2025